ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 63 RNI Number : KNKAN/25/A2770 10-03-2026 Tuesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :63 ರಾಯಚೂರು 10-03-2026 ಮಂಗಳವಾರ ಪುಟ 04 ಬೆಲೆ ರೂ.2/- ಮೊ:8660146563

ಹೆಣ್ಣು ಭ್ರೂಣ ಪತ್ತೆ - ಹತ್ಯೆ ತಡೆಗೆ ಪ್ರತಿ ಜಿಲ್ಲೆಗೂ ನೋಡಲ್ ಅಧಿಕಾರಿ ನೇಮಕ: ದಿನೇಶ್ ಗುಂಡೂರಾವ್

ಬೆಂಗಳೂರು,ಮಾ.09-

ಹೆಣ್ಣು ಭ್ರೂಣ ಲಿಂಗ ಪತ್ತೆ ಅಥವಾ ಹತ್ಯೆಯನ್ನು ಪರಿಣಾಮಕಾರಿ ತಡೆಗಟ್ಟಲು ಪ್ರತಿ ಜಿಲ್ಲೆಯಲ್ಲಿ ಓರ್ವ ನೋಡಲ್ ಅಧಿಕಾರಿ ನೇಮಿಸಲಾಗಿದೆ. ಬೆಂಗಳೂರು ನಗರದ ಜಿಬಿಎ ವ್ಯಾಪ್ತಿಯಲ್ಲಿ ಐವರು ಪಾಲಿಕೆ ಆಯುಕ್ತರಿಗೂ ಜವಾಬ್ದಾರಿ ವಹಿಸಲಾಗಿದ್ದು, ಇವರ ಅಡಿ 27 ಮಂದಿ ಕುಟುಂಬ ಕಲ್ಯಾಣ ಅಧಿಕಾರಿಗಳು (ಎಂಒಹೆಚ್) ಕಾರ್ಯ ನಿರ್ವಹಿಸಲಿದ್ದಾರೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ವಿಧಾನಪರಿಷತ್ ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್ ಸದಸ್ಯೆ ಉಮಾಶ್ರೀ ಪರವಾಗಿ ಐವನ್ ಡಿಸೋಜಾ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಹೆಣ್ಣು ಭ್ರೂಣ ಪತ್ತೆ ನಿಯಂತ್ರಿಸಲು ಹಾಗೂ ಜಾಗೃತಿಗಾಗಿ ನಿರಂತರವಾಗಿ ಇಲಾಖೆ ಶ್ರಮಿಸುತ್ತಿದೆ. ಅಲ್ಟ್ರಾ ಸೌಂಡ್ ಸ್ಕ್ಯಾನಿಂಗ್ ಸೆಂಟರ್‌ಗಳ ಮೇಲೆ ತಪಾಸಣೆ ಕಾರ್ಯ ಬಿಗಿಗೊಳಿಸಲಾಗಿದೆ. ಇದ'ಕ್ಕಾಗಿ ಪ್ರತಿ ಜಿಲ್ಲೆಯಲ್ಲಿ ನೊಡಲ್ ಅಧಿಕಾರಿ ನೇಮಿಸಲಾಗಿದೆ. ಬೆಂಗಳೂ ರಿನಲ್ಲಿ ಸಾವಿರಾರು ಸ್ಕ್ಯಾನಿಂಗ್ ಸೆಂಟರ್‌ಗಳಿದ್ದು, ಈ ಹಿಂದೆ ಜಿಲ್ಲಾಧಿಕಾರಿಗೆ ನೀಡಲಾಗಿದ್ದ ಅಧಿಕಾರವನ್ನು ಐವರು ಆಯುಕ್ತರಿಗೆ ವಹಿಸಲಾಗಿದೆ. ಅಲ್ಲದೇ, ನಗರದೆಲ್ಲೆಡೆ ತಪಾಸಣೆ ನಡೆಸಲು 27 ಎಂಒಹೆಚ್‌ಗಳಿಗೆ ಸೂಚಿಸಲಾಗಿದೆ ಎಂದರು.

ಭ್ರೂಣ ಪತ್ತೆ ಅಥವಾ ಹತ್ಯೆ ನಿಯಂತ್ರಿಸಲು ಪಿ.ಸಿ. ಹಾಗೂ ಪಿಎನ್‌ಡಿಟಿ ಕಾಯ್ದೆಯಡಿ ಈವರೆಗೂ 150 ಪ್ರಕರಣಗಳ ಪೈಕಿ 80 ಪ್ರಕರಣಗಳಲ್ಲಿ ದಂಡ ವಿಧಿಸಲಾಗಿದೆ. ಬಾಕಿ 70 ಪ್ರಕರಣಗಳು ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿವೆ. ಅನಧಿಕೃತವಾಗಿ ಹೆಣ್ಣು ಭ್ರೂಣ ಪತ್ತೆ ಬಗ್ಗೆ ನೀಡುವ ಮಾಹಿತಿದಾರರಿಗೆ ನೀಡುವ ಬಹುಮಾನವನ್ನು 50ರಿಂದ 1 ಲಕ್ಷ ರೂ.ಗೆ ಏರಿಸಲಾಗಿದೆ. ಈವರೆಗೂ ಮೂವರಿಗೆ ಬಹುಮಾನ ನೀಡಲಾಗಿದೆ ಎಂದು ವಿವರಿಸಿದರು.



496 ವಿವಿಧ ಔಷಧಗಳ ಖರೀದಿಗೆ ಟೆಂಡರ ರಾಜ್ಯ ಸರ್ಕಾರದ ಔಷಧ ಉಗ್ರಾಣಗಳಲಿ ಜೀವ ರಕ್ಷಕ ಔಷಧಗಳ ಕೊರತೆ ಕುರಿತು ಪ್ರಸ್ತಾಪಿಸಿದ ಬಿಜೆಪಿ ಸದಸ್ಯ ಡಾ. ಧನಂಜಯ ಸರ್ಜಿ, ಔಷಧವಿಲ್ಲದೇ ಇರುವುದರಿಂದ ಸಾರ್ವಜನಿಕರು ವೈದ್ಯರ ಮೇಲೆ ಕಿಡಿಕಾರುತ್ತಿದ್ದಾರೆ. ಈ ಮಧ್ಯೆ ವಿವಿಧ ಬೇಡಿಕೆ ಈಡೇರಿಕೆಗಳ ಒತ್ತಾಯಿಸಿ ಮಾರ್ಚ್ 11ರಿಂದ ವೈದ್ಯರು ಮುಷ್ಕರ ಮಾಡುತ್ತಿದ್ದಾರೆ. ಔಷಧಗಳ ಕೊರತೆಯಿಂದ ರೋಗಿಗಳ ತೊಂದರೆಯಾಗುತ್ತಿದೆ ಎಂದರು.

ಇದಕ್ಕೆ ಪ್ರತಿಕ್ರಿಯಿಸಿದ ಆರೋಗ್ಯ ಸಚಿವರು, ರಾಜ್ಯ ಔಷಧ ಉಗ್ರಾಣ ಮತ್ತು ಸರ್ಕಾರಿ ಆಸ್ಪತ್ರೆಗಳಿಗೆ ಔಷಧ ಪೂರೈಸಲು, ಕಳೆದ ಆಗಸ್ಟ್‌ನಲ್ಲಿ 860 ಕೋಟಿ ಮೊತ್ತದ ಔಷಧ ಖರೀದಿಸಲು ಅನುಮೋದಿಸಲಾಗಿದೆ. ಔಷಧ ಪೂರೈಕೆಯಲ್ಲಿ ಉನ್ನತ ಸೇವೆ ನೀಡುತ್ತಿರುವ ಕಂಪನಿಗಳನ್ನು ರೆಫರ್ ಮಾಡಲಾಗುತ್ತಿದ್ದು, ಸರಬರಾಜಾಗುವ ಔಷಧಗಳನ್ನು ಕಡ್ಡಾಯವಾಗಿ ಗುಣಮಟ್ಟ ಪರೀಕ್ಷೆ ನಡೆಸಿದ ಬಳಿಕ ಉಗ್ರಾಣದಿಂದ ಬಿಡಗಡೆ ಮಾಡಿ ಸಾರ್ವಜನಿಕರಿಗೆ ಬಳಕೆಗೆ ನಿರ್ಧರಿಸಲಾಗಿದೆ. ಇದಕ್ಕಾಗಿ ಐಎಎಸ್ ಹಾಗೂ ಕೆಎಎಸ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದರು.

ಕಳೆದ ಏಪ್ರಿಲ್‌ನಿಂದ ಈವರೆಗೂ 232 ಕೋಟಿ ಮೌಲ್ಯದ ಔಷಧ ಖರೀದಿಸಲಾಗಿದೆ. ಔಷಧ ಕೊರತೆಯಿರುವ ಆಸ್ಪತ್ರೆಗಳಿಗೆ ನೇರವಾಗಿ ಖರೀದಿಸಲು ಸೂಚಿಸಲಾಗಿದೆ. ಈಗಾಗಲೇ 496 ವಿವಿಧ ಔಷಧಿಗಳ ಖರೀದಿಗೆ ಸಂಬಂಧಿಸಿದಂತೆ ಟೆಂಡರ್ ಪ್ರಕ್ರಿಯೆ ಕೈಗೊಳ್ಳಲಾಗಿದ್ದು, 155 ಔಷಧಗಳ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದೆ. ಇನ್ನೊಂದು ತಿಂಗಳಲ್ಲಿ ಔಷಧಗಳ ಕೊರತೆ ಸಮಸ್ಯೆ ಸಂಪೂರ್ಣವಾಗಿ ಬಗೆಹರಿಯಲಿದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.

ಅಂಬೇಡ್ಕರ್ ವೃತ್ತದಲ್ಲಿ ಛಲವಾದಿ ಮಹಾಸಭಾದಿಂದ ಪ್ರತಿಭಟನೆ

ಹಳೆಯ ಮೀಸಲಾತಿ ಮುಂದುವರಿಸಲು ಒತ್ತಾಯ

ರಾಯಚೂರು,ಮಾ.09-

ಕೆನೆ ಪದರದಂತೆ ಒಳ ಮೀಸಲಾತಿ ಜಾರಿಗೊಳಿಸಬೇಕು, ಗೊಂದಲ ಸರಿಪಡಿಸಬೇಕು ಎಂದು ಒತ್ತಾಯಿಸಿ ಛಲವಾದಿ ಮಹಾಸಭಾದ ಜಿಲ್ಲಾ ಸಮಿತಿಯ ಪಧಾದಿಕಾರಿಗಳು ನಗರದ ಅಂಬೇಡ್ಕರ್ ವೃತ್ತದಲ್ಲಿ ಸೋಮವಾರ ಪ್ರತಿಭಟನೆ ನಡೆಸಿದರು.



ನಿವೃತ್ತ ನ್ಯಾಯಾಮೂರ್ತಿ ನಾಗಮೋಹನ್ ದಾಸ್ ರವರು ಸಿದ್ಧಪಡಿಸಿರುವ ಒಳ ಮೀಸಲಾತಿ ಸಮೀಕ್ಷೆ ವರದಿಯು ಅವೈಜ್ಞಾನಿಕತೆಯಿಂದ ಕೂಡಿದೆ. ಇದರಿಂದ ಮೂಲ ನಿವಾಸಿಗಳಾದ ಆದಿ ದ್ರಾವಿಡ, ಆದಿ ಕರ್ನಾಟಕ ಮತ್ತು ಆದಿ ಅಂದ್ರ ಪಂಗಡಗಳಿಗೆ ಸೇರಿದ ಬಲಗೈ 19 ಸಮುದಾಯಗಳಿಗೆ ಸಾಮಾಜಿಕ, ಶೈಕಣಿಕ ಮತ್ತು ಔದ್ಯೋಗಿಕವಾಗಿ ಅನ್ಯಾಯವಾಗಿದೆ ಎಂದು ಆರೋಪಿಸಿದರು.

ಈ ನಡುವೆ ಸರ್ಕಾರ ಮೀಸಲಾತಿ ಪ್ರಮಾಣವನ್ನು ಶೇ.56ಕ್ಕೆ ಹೆಚ್ಚಿಸಿರುವುದನ್ನು- ಪ್ರಶ್ನಿಸಿ, ಘನ ಉಚ್ಚ ನ್ಯಾಯಾಲಯವು ಸಂವಿಧಾನದ ಅನುಚ್ಛೇದದನ್ವಯ ಶೇ.50 ಭಾರದೆಂದು ತಡೆಯಾಜ್ಞೆ ನೀಡಲಾಗಿರುತ್ತದೆ ಎಂದು ಹೇಳಿದರು.

ಒಳಮೀಸಲಾತಿ ಪ್ರಕ್ರಿಯೆಗೆ ಸಂಬಂದಿಸಿದಂತೆ ಕಾನೂನು ರೂಪಿಸಿ ಜಾರಿಯಾಗುವವರೆಗೆ ಸರ್ಕಾರದ ಯಾವುದೇ ಇಲಾಖೆ, ಸಂಸ್ಥೆಗಳು ಹಾಗೂ ಶೈಕ್ಷಣಿಕ ವಿಶ್ವವಿದ್ಯಾಲಯಗಳಲ್ಲಿ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಲು ಕ್ರಮವಹಿಸುವುದು ಮತ್ತು ಒಳ ಮೀಸಲಾತಿ ಗೊಂದಲಗಳು ಪರಿಷ್ಕರಿಸುವ ತನಕ ಈ ಹಿಂದಿನಂತೆ ಮೀಸಲಾತಿ ನಿಯಮ 33 ರಂತೆ

3ನೇ ಪುಟಕ್ಕೆ

ಕಟ್ಟಡ ಕುಸಿದು ಇಬ್ಬರು ಗಂಡ,ಹೆಂಡತಿ ದುರ್ಮರಣ

ಹಟ್ಟಿ ಚಿನ್ನದ ಗಣಿ ರೋಡಲಬಂಡ (ತವಗ)ಪಂಚಾಯತಿ ವ್ಯಾಪ್ತಿಯ ಯಲಗಟ್ಟಾ ಗ್ರಾಮದಲ್ಲಿ ಘಟನೆ ಮನೆ ಕಟ್ಟಡ ಕೆಲಸ ಮಾಡುವ ಇಬ್ಬರು ಗಂಡ ಹೆಂಡತಿ ಮನೆ ಬಾಗಿಲೇ ಮುಂದಿನ ಕುಂಬೆ ಕುಸಿದು ಸಾವನಪ್ಪಿದ ಘಟನೆ ಯಲಗಟ್ಟಾದಲ್ಲಿ ನಡೆದಿದೆ,



ಸ್ಥಳಕ್ಕೆ ಪರಿಶೀಲನೆಗೆ ಭೇಟಿ ನೀಡಿದ ಪೊಲೀಸ್ ಹಟ್ಟಿ ಚಿನ್ನದ ಗಣಿ ಠಾಣೆಯ ಪಿಎಸ್ಐ ರಾಮಲಿಂಗಪ್ಪ, ಮತ್ತು ಎಎಸ್ಐ ರಹಿಮಾನ್ ಸಾಹೇ ಬು ಮತ್ತು ನಾರಾಯಣ್ಣ ಪೊಲೀಸ್ ,ಮೂಲಕ ಜಾಗ ಪರಿಶೀಲನೆ ಮತ್ತು ಬಾಡಿ ಪೋಸ್ಟ್ ಮಾರ್ಟಂ ಮಾಡಲು ಆಸ್ಪತ್ರೆಗೆ ತೆಗೆದುಕೊಂಡು ಹೋಗಲಾಯಿತು. ಮೃತಪಟ್ಟ ವ್ಯಕ್ತಿ ದ್ಯಾವಣ್ಣ ತಂದೆ ಮುದುಕಪ್ಪ(ಕೆರೆ) ಮತ್ತು ಹೆಂಡತಿ ಇಬ್ಬರೂ ದುರಮರಣ ಹೊಂದಿದ್ದಾರೆ.

ಬೆಳಗ್ಗೆ 10:30 ಸುಮಾರ ರೆಡ್ಡಪ್ಪ ತಂ ನಿಂಗಪ್ಪ ಹಡಪದ ಅವರ ಮನಿ ಕೆಲಸ ಮಾಡಲು ಹೋಗಿದ್ದ ಕಾರ್ಮಿಕರು ಮನೆ ಮುಂದಿನ ಬಾಗಿಲು ಡಿಸೈನ್ ಮಾಡಲು ಹೋಗಿ ಮನೆ ಮುಂದಲಿನ ಶಲ್ಪು ಕುಂಬೆ ಕುಸಿದು ಗಂಡ ಹೆಂಡತಿ ಸಾವನ್ನಪ್ಪಿದ ಘಟನೆ ಜರುಗಿದೆ,ಇಬ್ಬರು ಮಕ್ಕಳು ಬಿಟ್ಟು ಅಗಲಿದರೆ, ಕುಟುಂಬಸ್ಥರು ಕಣ್ಣೀರಿನಲ್ಲಿ ಕೈ ತೊಳೆಯುವಂತೆ ಅಕ್ರಂದನ ಮುಗಿಲು ಮುಟ್ಟಿದೆ

ಈ ಪ್ರಕರಣವನ್ನು ಹಟ್ಟಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ

ವಿಮೆನ್ ಇಂಡಿಯಾ ಮೂವ್ಮೆಂಟ್ ವತಿಯಿಂದ ವೃದ್ಧಾಶ್ರಮದಲ್ಲಿ ಮಹಿಳಾ ದಿನಾಚರಣೆ

ರಾಯಚೂರು: ಇಲ್ಲಿನ ವಿಮೆನ್ ಇಂಡಿಯಾ ಮೂವ್ಮೆಂಟ್ ರಾಯಚೂರು ಜಿಲ್ಲಾ ಸಮಿತಿ ವತಿಯಿಂದ ರಾಯಚೂರಿನ ವೃದ್ಧಾಶ್ರಮದಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಮಾಡಲಾಯಿತು.



ಈ ವೇಳೆ ಆಶ್ರಮದಲ್ಲಿನ ಹಿರಿಯ ನಾಗರಿಕರಿಗೆ ಹಣ್ಣುಗಳು ಮತ್ತು ಆಹಾರವನ್ನು ವಿತರಿಸಿತು.

ಈ ಕಾರ್ಯಕ್ರಮವನ್ನು ಹಿರಿಯ ನಾಗರಿಕರ ಮೇಲಿನ ಪ್ರೀತಿ, ಗೌರವ ಮತ್ತು ಕಾಳಜಿಯನ್ನು ವ್ಯಕ್ತಪಡಿಸುವ ಉದ್ದೇಶದಿಂದ ಆಯೋಜಿಸಲಾಗಿತ್ತು. ಸಮಿತಿಯ ಸದಸ್ಯರು ವೃದ್ಧಾಶ್ರಮದ ನಿವಾಸಿಗಳೊಂದಿಗೆ ಸಮಯ ಕಳೆಯುತ್ತಾ, ಅವರೊಂದಿಗೆ ಮಾತುಕತೆ ನಡೆಸಿ ಅವರಿಗೆ ಸಂತೋಷ ಮತ್ತು ಧೈರ್ಯ ನೀಡಿದರು. ಹಣ್ಣುಗಳು ಮತ್ತು ಆಹಾರವನ್ನು ಪ್ರೀತಿ ಮತ್ತು ಆತ್ಮೀಯತೆಯಿಂದ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸದಸ್ಯರು, ಅಂತರರಾಷ್ಟ್ರೀಯ ಮಹಿಳಾ ದಿನವು ಮಹಿಳೆಯರ ಸಾಧನೆಗಳನ್ನು ಆಚರಿಸುವ ದಿನ ಮಾತ್ರವಲ್ಲದೆ, ಸಮಾಜದಲ್ಲಿ ಮಾನವೀಯತೆ, ಸೇವಾಭಾವನೆ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಉತ್ತೇಜಿಸುವ ಅವಕಾಶವೂ ಆಗಿದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಉಪಾಧ್ಯಕ್ಷೆ ಸಮೀನಾ ಮ್ಯಾಡಮ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಾದಿಯಾ ಮ್ಯಾಡಮ್, ಜಿಲ್ಲಾ ಕಾರ್ಯದರ್ಶಿ ಶಾಹಿದಾ ಮ್ಯಾಡಮ್ ಮತ್ತು ಕಾರ್ಯಕರ್ತೆ ನಸ್ರೀನ್ ಮ್ಯಾಡಮ್ ಉಪಸ್ಥಿತರಿದ್ದರು.

ದ್ವಿತೀಯ ಪಿಯುಸಿ ಪರೀಕ್ಷೆ; 466 ವಿದ್ಯಾರ್ಥಿಗಳು ಗೈರು ಹಾಜರಿ

ರಾಯಚೂರು ಮಾರ್ಚ್ 09


ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಿದ 2026ರ ಮಾರ್ಚ್ 09ರ ಸೋಮವಾರ ದಂದು ನಡೆದ ದ್ವಿತೀಯ ಪಿಯುಸಿ-01ರ ಶಿಕ್ಷಣ, ರಸಾಯಶಾಸ್ತ ಹಾಗೂ ಬೇಸಿಕ್ ಗಣಿತ ವಿಷಯದ ಪರೀಕ್ಷೆಯಲ್ಲಿ ಒಟ್ಟು 466 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ.

ಜಿಲ್ಲೆಯ 43 ಪರೀಕ್ಷೆ ಕೇಂದ್ರಗಳಲ್ಲಿ ಶಿಕ್ಷಣ ವಿಷಯದಲ್ಲಿ ಒಟ್ಟು 2,454 ವಿದ್ಯಾರ್ಥಿಗಳು ನೋಂದಣೆಯಾಗಿದ್ದು, 2,102 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಿಯಾಗಿದ್ದಾರೆ. 352 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ.

ರಸಾಯಶಾಸ್ತ ವಿಷಯದಲ್ಲಿ ಒಟ್ಟು 5,884 ವಿದ್ಯಾರ್ಥಿಗಳು ನೋಂದಣೆಯಾಗಿದ್ದು, 5,771 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಿಯಾಗಿದ್ದಾರೆ. 113 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ. ಅಲ್ಲದೆ ಬೇಸಿಕ್ ಗಣಿತ ವಿಷಯದಲ್ಲಿ ಒಟ್ಟು 4 ವಿದ್ಯಾರ್ಥಿಗಳು ನೋಂದಣೆಯಾಗಿದ್ದು, 3 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಿಯಾಗಿದ್ದಾರೆ.

ಒಬ್ಬ ವಿದ್ಯಾರ್ಥಿ ಪರೀಕ್ಷೆಗೆ ಗೈರು ಹಾಜರಿಯಾಗಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಭಾರಿ ಉಪನಿರ್ದೇಶಕರಾದ ಸೋಮಶೇಖರಪ್ಪ ಹೋಕ್ರಾಣಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಳಮೀಸಲಾತಿ ಜಾರಿ ಒತ್ತಾಯಿಸಿ ಮಾ.11ಕ್ಕೆ ರಾಯಚೂರು ಬಂದ್ -ಎಂ. ವಿರುಪಾಕ್ಷಿ



ರಾಯಚೂರು, ಮಾ.9-

ಒಳಮೀಸಲಾತಿ ಜಾರಿಗೆ ಒತ್ತಾಯಿಸಿ ಮಾರ್ಚ್ 11 ರಂದು ರಾಯಚೂರು ನಗರ ಬಂದ್ ನಡೆಸಲು ತೀರ್ಮಾನಿಸಲಾಗಿದ್ದು, ನಗರದ ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಒಳಮೀಸಲಾತಿ ಐಕ್ಯ ಹೋರಾಟ ಸಮಿತಿಯ ಮುಖಂಡ ಎಂ. ವಿರುಪಾಕ್ಷಿ ತಿಳಿಸಿದ್ದಾರೆ.

ಸೋಮವಾರ ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಹಳೆಯ ಮೀಸಲಾತಿ ಪದ್ಧತಿಯಡಿ ಹುದ್ದೆಗಳನ್ನು ಭರ್ತಿ ಮಾಡಲು ಮುಂದಾಗಿರುವುದನ್ನು ಮಾದಿಗ ಸಮುದಾಯ ಖಂಡಿಸುತ್ತಿದೆ ಎಂದರು.

ಸರ್ಕಾರವನ್ನು ದಿಕ್ಕು ತಪ್ಪಿಸುವ ಕೆಲಸವನ್ನು ಸಮಾಜ ಕಲ್ಯಾಣ ಇಲಾಖೆಯ ಸಚಿವರು ಮಾಡುತ್ತಿದ್ದಾರೆ. ಒಳಮೀಸಲಾತಿ ಜಾರಿಗೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಈ ಹೋರಾಟದಲ್ಲಿ ಪ್ರಗತಿಪರ ಸಂಘಟನೆಗಳು, ವಿದ್ಯಾರ್ಥಿಗಳು, ಯುವಕರು ಹಾಗೂ ಮಾದಿಗ ಸಮುದಾಯದ ಮುಖಂಡರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಪ'ತ್ರಿಕಾಗೋಷ್ಠಿಯಲ್ಲಿ ರವೀಂದ್ರ ಜಲ್ದಾರ್, ನರಸಿಂಹಲು, ಆಂಜನೇಯ, ಶಾಂತಪ್ಪ, ರವಿಕುಮಾರ್, ನರಸಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ದೇಶದ ಏಕತೆ ಕಾಪಾಡಲು ಎಲ್ಲ ಧರ್ಮೀಯರು ಒಗ್ಗಟ್ಟಾಗಬೇಕು: ಸಲೀಂ ಅಹ್ಮದ್

ಸಿಂಧನೂರು: ಭಾರತ ದೇಶವು ಸರ್ವ ಜನಾಂಗಗಳ ಶಾಂತಿಯ ತೋಟವಾಗಿದ್ದು, ಹಿಂದೂ-ಮುಸ್ಲಿಂ ಬಾಂಧವರು ಹಾಲುಜೇನಿನಂತೆ ಒಂದಾಗಿ ಸಮಾಜದಲ್ಲಿ ಅಶಾಂತಿ ಸೃಷ್ಟಿಸುವ ಶಕ್ತಿಗಳನ್ನು ಮಣಿಸಿ ದೇಶ ಕಟ್ಟುವ ಕೆಲಸ ಮಾಡಬೇಕು ಎಂದು ವಿಧಾನಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್ ಅಭಿಪ್ರಾಯಪಟ್ಟರು.

ನಗರದ ಮಿಲಾಪ್ ಶಾದಿ ಮಹಲ್‌ನಲ್ಲಿ ಗಿರಾಮಿಪಾಷಾ ಜಾಗೀರ್‌ದಾರ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಸೌಹಾರ್ದ ಇಫ್ತಾರ್ ಕೂಟದಲ್ಲಿ ಅವರು ಮಾತನಾಡಿದರು.

ಭಾರತದ ಇತಿಹಾಸದಲ್ಲಿ ಎಲ್ಲಾ ಧರ್ಮೀಯರು ಸಹೋದರರಂತೆ ಬದುಕಿ ಕೋಮು ಸಾಮರಸ್ಯ ಕಾಪಾಡಿಕೊಂಡಿದ್ದಾರೆ. ಆದರೆ ಇತ್ತೀಚೆಗೆ ಕೆಲವು ದುಷ್ಟ ಶಕ್ತಿಗಳು ಸಮಾಜದಲ್ಲಿ ಬಿರುಕು ಮೂಡಿಸಿ ಅಶಾಂತಿ ಸೃಷ್ಟಿಸುವ ಕೆಲಸ ಮಾಡುತ್ತಿವೆ. ಅಂತಹ ಶಕ್ತಿಗಳ ವಿರುದ್ಧ ಎಲ್ಲ ಧರ್ಮೀಯರು ಒಗ್ಗಟ್ಟಾಗಿ ಹೋರಾಡಬೇಕು. ದೇಶದ ವಿಚಾರ ಬಂದಾಗ ಎಲ್ಲರೂ ಒಂದಾಗಿ ದೇಶ ಕಟ್ಟಿದಾಗ ಮಾತ್ರ ಸಮಾಜದಲ್ಲಿ ಶಾಂತಿ ಮತ್ತು ಸಾಮರಸ್ಯ ಉಳಿಯುತ್ತದೆ ಎಂದು ಹೇಳಿದರು.



ಸ್ವಾತಂತ್ರ್ಯ ಹೋರಾಟದಲ್ಲಿ ಮುಸ್ಲಿಂ ಸಮುದಾಯದ ತ್ಯಾಗ ಮತ್ತು ಬಲಿದಾನವನ್ನು ಸ್ಮರಿಸಬೇಕು. ಪ್ರತಿಯೊಬ್ಬರೂ ದೇಶಾಭಿಮಾನ ಬೆಳೆಸಿಕೊಂಡು ಮುಂದುವರಿಯಬೇಕು. ರಾಜ್ಯ ಸರ್ಕಾರ ಈ ಬಾರಿ ಬಜೆಟ್‌ನಲ್ಲಿ ಮುಸ್ಲಿಂ ಸಮುದಾಯದ ಅಭಿವೃದ್ಧಿಗಾಗಿ 4,000 ಕೋಟಿ ರೂ. ಅನುದಾನ ಮೀಸಲಿಟ್ಟದ್ದು, ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಗಿರಾಮಿಪಾಷಾ ಜಾಗೀರ್‌ದಾರ್ ಅವರು ಈ ಭಾಗದಲ್ಲಿ ಸಾಕಷ್ಟು ಜನಸೇವೆ ಮಾಡಿದ್ದು, ಅವರ ಹೆಸರಿನಲ್ಲಿ ಟ್ರಸ್ಟ್ ಉತ್ತಮ ಕಾರ್ಯಗಳನ್ನು ಮಾಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಹಂಪನಗೌಡ ಬಾದರ್ಲಿ ಅವರು, ರಮಝಾನ್ ಮಾಸದ ಹಿನ್ನೆಲೆ ದೇಶಾದ್ಯಂತ ಮುಸ್ಲಿಂ ಬಾಂಧವರು ಕಟ್ಟುನಿಟ್ಟಿನ ವ್ರತ ಉಪವಾಸ ಆಚರಿಸುತ್ತಿರುವುದು ಶ್ರೇಷ್ಠವಾಗಿದೆ. ಮೌಲ್ಯಾಧಾರಿತ ಜೀವನ ನಡೆಸಲು ಹಾಗೂ ಉತ್ತಮ ಸಮಾಜ ನಿರ್ಮಿಸಲು ಹಬ್ಬಗಳ ಆಚರಣೆ ಮಹತ್ವದ್ದಾಗಿದೆ ಎಂದು ಹೇಳಿದರು.

ಎಲ್ಲ ಧರ್ಮೀಯ ಯುವಪೀಳಿಗೆ ಧರ್ಮದ ಉದ್ದೇಶಗಳನ್ನು ಅರಿತು ಸದೃಢ ಹಾಗೂ ಸೌಹಾರ್ದತೆಯ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಅವರು ತಿಳಿಸಿದರು.

ಗಿರಾಮಿಪಾಷಾ ಜಾಗೀರ್‌ದಾರ್ ಟ್ರಸ್ಟ್‌ನ ಮುಖ್ಯಸ್ಥ ಸೈಯದ್ ಹಾರೂನ್ ಪಾಷಾ ಜಾಗೀರ್‌ದಾರ್ ಕಾರ್ಯಕ್ರಮದ ನೇತೃತ್ವ ವಹಿಸಿದ್ದರು. ರೌಡಕುಂದಾ ಬಂಗಾರಿಕ್ಯಾಂಪಿನ ಸದಾನಂದ ಶರಣರು ಸಾನಿಧ್ಯ ವಹಿಸಿ

3ನೇ ಪುಟಕ್ಕೆ



ಜಿಲ್ಲಾ ಏಮ್ಸ್ ಹೋರಾಟ ಇಂದಿಗೆ 1397 ನೇ ದಿನಕ್ಕೆ

ರಾಯಚೂರು,ಮಾ.09-

ಜಿಲ್ಲಾ ಏಮ್ಸ್ ಹೋರಾಟ ಸಮಿತಿ ನಡೆಸುತ್ತಿರುವ ಅನಿರ್ದಿಷ್ಟ ಧರಣಿ ಸತ್ಯಾಗ್ರಹ ಇಂದಿಗೆ 1397 ನೇ ದಿನಕ್ಕೆ ಮುಂದುವರೆದಿದೆ. ಪ್ರಾದೇಶಿಕ ಅಸಮತೋಲನೆ ನಿವಾರಣೆಗಾಗಿ, ಐಐಟಿ ಇಂದ ವಂಚಿತಗೊಂಡ, ಮಹತ್ವಕಾಂಕ್ಷಿ ಜಿಲ್ಲೆ ರಾಯಚೂರಿಗೆ ಏಮ್ಸ್ ಆರೋಗ್ಯ ಸಂಸ್ಥೆಯನ್ನು ಮಂಜೂರು ಮಾಡಲೇಬೇಕೆಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು.

ಇಂದು ನಡೆದ ಧರಣಿ ಸತ್ಯಾಗ್ರಹದಲ್ಲಿ ಡಾ. ಬಸವರಾಜ್ ಕಳಸ ,ಅಶೋಕ್ ಕುಮಾರ್ ಜೈನ್ , ಇಲ್ಲೂರು ಗೋಪಾಲಯ್ಯ, ಎಸ್. ಮಾರಪ್ಪ ವಕೀಲರು, ಜಾನ್ ವೆಸ್ಲಿ, ವೆಂಕಟರೆಡ್ಡಿ ದಿನ್ನಿ, ಕಾಮರಾಜ್ ಪಾಟೀಲ್, ವೀರೇಶ್ ಬಾಬು, ಜೈ ಭೀಮ್ ವಲ್ಲಭ, ಡಾ .ಜಗದೀಶ್ ಪೂರ ತಿಪ್ಪಲಿ, ಶ್ರೀನಿವಾಸ್ ಜೋಶಿ, ವೀರಭದ್ರಯ್ಯ ಸ್ವಾಮಿ, ಶರಣಪ್ಪ ಅಸ್ಕಿಹಾಳ್, ಮಹೇಂದ್ರ ಸಿಂಗ್, ಆರಿಫ್ ಮಿಯಾ ನೆಲಹಾಳ್, ಎಂ ಮಹೇಶ್ ಮುಂತಾದವರು ಭಾಗವಹಿಸಿದ್ದರು.

ಬಡವರಿಗೆ 2 ಸಾವಿರ ಮನೆ ಹಂಚಿಕೆ : ಡಿಸಿಎಂ

ಕಲಬುರಗಿ, ಮಾ.09-

ಕಳೆದ ಎರಡು ವರ್ಷಗಳಲ್ಲಿ ಸುಮಾರು 2 ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಹಣ ಕಲಬುರಗಿ ಜಿಲ್ಲೆಗೆ ನೀಡಲಾಗಿದೆ. ಸುಮಾರು 2,000 ಮನೆಗಳನ್ನು ಕೊಳಚೆ ನಿರ್ಮೂಲನಾ ಮಂಡಳಿಯಿಂದ ಹಂಚಿಕೆ ಮಾಡಲಾಗಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಚಿತ್ತಾಪುರದಲ್ಲಿ ರವಿವಾರ ನಡೆದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

365 ಕೋಟಿ ರೂ. ವೆಚ್ಚದಲ್ಲಿ ಬೆಣ್ಣೆತೊರ ಜಲಾಶಯಕ್ಕೆ ಕಾಗಿಣಾ ಮತ್ತು ಭೀಮಾ ನದಿ ಸಂಗಮದಿಂದ ನೀರು ತುಂಬಿಸಲಾಗುತ್ತಿದೆ. ಐದು ಗ್ಯಾರಂಟಿಗಳ ಜೊತೆಗೆ ಭೂ ಗ್ಯಾರಂಟಿ ನೀಡಿ ಬಡವರ ಮನೆ ಬೆಳಕಾಗಿದ್ದೇವೆ. 400 ಕ್ಕೂ ಹೆಚ್ಚು ಕೆರೆಗಳನ್ನು ತುಂಬಿಸುವ ಕೆಲಸ ಮಾಡುತ್ತೇವೆ. ಆ ಮೂಲಕ ನೀರಾವರಿ ಗ್ಯಾರಂಟಿ ನೀಡುತ್ತಿದ್ದೇವೆ ಎಂದರು.

ಶಿಕ್ಷಣ ಇಲಾಖೆ ಅಡಿಯಲ್ಲಿ ರಾಜ್ಯದಲ್ಲಿ 2000 ಕೆಪಿಎಸ್ ಶಾಲೆಗಳನ್ನು ಸ್ಥಾಪಿಸಲು ತೀರ್ಮಾನ ಮಾಡಿದ್ದೇವೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ 330 ಶಾಲೆಗಳನ್ನು ಸ್ಥಾಪಿಸಲಾಗುತ್ತದೆ. ಜೊತೆಗೆ 2.50 ಲಕ್ಷ ಖಾಲಿ ಹುದ್ದೆಗಳನ್ನು ಹಂತ ಹಂತವಾಗಿ ತುಂಬಲಾಗುವುದು. ಸಧ್ಯ 56,000 ಕ್ಕೂ ಅಧಿಕ ಖಾಲಿ ಹುದ್ದೆ ತುಂಬಲು ಈಗಾಗಲೇ ಕ್ರಮವಹಿಸಲಾಗಿದೆ ಎಂದರು.

ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯದ ಜನರಿಗೆ ನೆಮ್ಮದಿ ಜೀವನ ನಡೆಸಲು ಸರ್ಕಾರ ಪ್ರತಿ ವರ್ಷ 52,000 ಕೋಟಿ ರೂ.ಗೂ ಅಧಿಕ ವೆಚ್ಚ ಮಾಡುತ್ತಿದೆ. ಇದು ನಮ್ಮ



ಬದ್ಧತೆ ಎಂದರು. ಸಾಧನೆ ತನ್ನ ಪಾಡಿಗೆ ಆಗುವುದಿಲ್ಲ, ಅದರ ಹಿಂದೆ ಶ್ರಮ ಇರಬೇಕು, ಛಲ ಇರಬೇಕು. ಜನರ ಬದುಕನ್ನು ಬದಲಾವಣೆ ಮಾಡುತ್ತೇನೆ ಎನ್ನುವ ಹಠ ಇರಬೇಕು. ಜನರ ಕಣ್ಣೀರನ್ನು ಒರೆಸುವ ಕೆಲಸ ಮಾಡಬೇಕು. ಮಲ್ಲಿಕಾರ್ಜುನ ಖರ್ಗೆ ಅವರ ಋಣವನ್ನ ಕಲ್ಯಾಣ ಕರ್ನಾಟಕದ ಜನತೆ ತೀರಿಸಿದ್ದಾರೆ. 371 ಜೆ ಮೂಲಕ ಈ ಭಾಗದ ಜನರ ಬದುಕನ್ನು ಬದಲಾವಣೆ ಮಾಡಿದ್ದಾರೆ. ಈ ಭಾಗದಲ್ಲಿ ಸಂಸತ್ ಸದಸ್ಯರನ್ನು ಗೆಲ್ಲಿಸುವ ಮೂಲಕ ಅವರಿಗೆ ಋಣ ಸಂದಾಯ ಮಾಡಿದ್ದೀರಿ ಎಂದರು.

ಪ್ರಿಯಾಂಕ್ ಖರ್ಗೆ ಭವಿಷ್ಯದ ನಾಯಕ : ನಮ್ಮ ರಾಜ್ಯಕ್ಕೆ ಭವಿಷ್ಯದ ನಾಯಕರಾಗಿ ಪ್ರಿಯಾಂಕ್ ಖರ್ಗೆ ಅವರನ್ನು ಈ ಕಲಬುರ್ಗಿ ಜನತೆ ನೀಡಿದ್ದಾರೆ. ಅವರಿಗೆ ನಮ್ಮೆಲ್ಲರ ಪರವಾಗಿ ಕೋಟಿ, ಕೋಟಿ ನಮಸ್ಕಾರಗಳು ಎಂದರು. ಸಚಿವ ಪ್ರಿಯಾಂಕ್ ಖರ್ಗೆ ಅವರ ಕಾರ್ಯಕ್ಷಮತೆ ಅತ್ಯುತ್ತಮವಾಗಿದೆ. ಮಲ್ಲಿಕಾರ್ಜುನ ಖರ್ಗೆ ಸಾಹೇಬರ ಮಾರ್ಗದರ್ಶನದಲ್ಲಿ ಪ್ರಿಯಾಂಕ್ ಖರ್ಗೆ ಉತ್ತಮ ಕೆಲಸ ಮಾಡುತ್ತಿದ್ದಾರೆ. ಯಾವುದೇ ಇಲಾಖೆಯ ಜವಾಬ್ದಾರಿ ನೀಡಿದರೂ ಅಷ್ಟೇ ದಕ್ಷತೆಯಿಂದ ಕೆಲಸ ಮಾಡುತ್ತಾರೆ. ಪಕ್ಷ, ರಾಜ್ಯದ ಅಭಿವೃದ್ಧಿಗೆ ನ್ಯಾಯ ಒದಗಿಸುವ ಕೆಲಸ ಮಾಡುತ್ತಿದ್ದಾರೆ. ಸರ್ವ ಸಮುದಾಯಗಳ ಏಳಿಗೆಗೆ ದುಡಿಯುತ್ತಿದ್ದಾರೆ ಎಂದರು.

ಅವರು ಎಲ್ಲರನ್ನೂ ಒಟ್ಟಿಗೆ ತೆಗೆದುಕೊಂಡು ಹೋಗುತ್ತಿದ್ದಾರೆ. ಕನಕಪುರದ ಜನತೆ ನನಗೆ ಆಶೀರ್ವಾದ ಮಾಡಿದಂತೆ ನೀವು ಕೂಡಾ ಪ್ರಿಯಾಂಕ್ ಖರ್ಗೆ, ರಾಧಾಕೃಷ್ಣ ದೊಡ್ಡಮನಿ ಅವರಿಗೆ ಆಶೀರ್ವಾದ ಮಾಡಬೇಕು ಹಾಗೂ ಅವರ ಕುಟುಂಬದ ಜೊತೆಗೆ ಸದಾ ಇರಬೇಕು ಎಂದು ಮನವಿ ಮಾಡಿದರು.

ಮಲ್ಲಿಕಾರ್ಜುನ ಖರ್ಗೆ ಅವರು ಈ ಹಿಂದೆ ನೀರಾವರಿ ಸಚಿವರಾಗಿದ್ದಾಗ ನೂರಾರು ಚೆಕ್ ಡ್ಯಾಂಗಳನ್ನು ನಿರ್ಮಾಣ ಮಾಡಿ ಕೆರೆಗಳನ್ನು ತುಂಬಿಸಿದವರು. ಅನೇಕ ಕಡೆ ಅಂತರ್ಜಲ ಸಾವಿರಾರು ಅಡಿ ತಲುಪಿತ್ತು. ಈಗ 300- 400 ಅಡಿಗಳಿಗೆ ನೀರು ದೊರೆಯುತ್ತಿದೆ ಎಂದು ತಿಳಿಸಿದರು.

ಮಲ್ಲಿಕಾರ್ಜುನ ಖರ್ಗೆ ಅವರು ನೀಡಿರುವ ಕೊಡುಗೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಶತಮಾನಗಳ ಕಾಲ ಚಿರಸ್ಥಾಯಿಯಾಗಿ ಉಳಿಯಲಿದೆ. ಮರಕ್ಕೆ ಬೇರು ಮುಖ್ಯ ಅದೇ ರೀತಿ ಈ ಭಾಗದ ಜನರಿಗೆ ಖರ್ಗೆ ಅವರ ಮೇಲೆ ನಂಬಿಕೆ. ಕಲ್ಯಾಣ ಕರ್ನಾಟಕದ ಜನರ ಬದುಕಿಗೆ ಅವರು ಕೊಟ್ಟಂತ ಕೆಲಸಗಳು ಇಡೀ ದೇಶದ ಜನರಿಗೆ ಗೊತ್ತು ಎಂದರು.

ಕೃಷ್ಣಾ ಮೇಲ್ದಂಡೆ ಯೋಜನೆ 3ರ ಅನುಷ್ಠಾನಕ್ಕೆ ಭೂಸ್ವಾಧೀನ ನಡೆಸಲು ಮುಂದಾಗಿದ್ದೇವೆ. ಒಂದು ಎಕರೆಗೆ 35- 40 ಲಕ್ಷ ರೂ. ಪರಿಹಾರ ನಿಗದಿ ಮಾಡಲಾಗಿದೆ. ನಮ್ಮ ನೀರು ನಮ್ಮ ಹಕ್ಕು. ಆಂಧ್ರ ಹಾಗೂ ಮಹಾರಾಷ್ಟ್ರದವರು ಯೋಜನೆ ಅನುಷ್ಠಾನಕ್ಕೆ ಅಡ್ಡಗಾಲು ಹಾಕಿದ್ದಾರೆ ಎಂದು ಹೇಳಿದರು.

ಈ ರಾಜ್ಯದ ರೈತರ ಪರವಾಗಿ ನಮ್ಮ ಸರ್ಕಾರ ಕೆಲಸ ಮಾಡುತ್ತಿದೆ. ಜನಸಾಮಾನ್ಯರ ಪರವಾಗಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ಅವರ ಜೀವನಕ್ಕೆ ನೆರವಾಗಿದೆ. ಐದು ಗ್ಯಾರಂಟಿ ಯೋಜನೆಗಳು ಬದುಕನ್ನು ಹಸನಾಗಿಸಿದೆ. 20 ಸಾವಿರ ಕೋಟಿಯನ್ನು ರೈತರ ಪಂಪ್ ಸೆಟ್ ಗಳಿಗೆ ಉಚಿತ ವಿದ್ಯುತ್ ನೀಡಲು ಬಳಸುತ್ತಿದ್ದೇವೆ ಎಂದರು.

ಗ್ಯಾಸ್ ಸಿಲಿಂಡರ್ ಬೆಲೆ ಏರಿಕೆ; ಬಾಯಿ ಬಿಡದ ಬಿಜೆಪಿ ನಾಯಕರು : ಬಿಜೆಪಿ ಸರ್ಕಾರ ಗ್ಯಾಸ್ ಸಿಲಿಂಡರ್ ಬೆಲೆಯನ್ನ 60 ರೂಪಾಯಿ ಏರಿಕೆ ಮಾಡಿದೆ. ಇದರ ಬಗ್ಗೆ ಒಬ್ಬನೇ ಒಬ್ಬ ಬಿಜೆಪಿ ನಾಯಕರು ಬಾಯಿ ಬಿಡುತ್ತಿಲ್ಲ. ಕಮಲ ಕೆರೆಯಲ್ಲಿದ್ದರೆ ಚೆಂದ, ತೆನೆ ಹೊಲದಲ್ಲಿದ್ದರೆ ಚೆಂದ, ದಾನ ಧರ್ಮ ಮಾಡುವ ಕೈ ಅಧಿಕಾರದಲ್ಲಿದ್ದರೆ ಚೆಂದ ಎಂದು ತಿಳಿಸಿದರು.



ಸಮಾಜದ ಅಭಿವೃದ್ಧಿಗೆ ಮಹಿಳೆಯರು ಮಹತ್ವದ ಕೊಡುಗೆ ನೀಡುತ್ತಿದ್ದಾರೆ-ಸಚಿವ ಈಶ್ವರ ಬಿ.ಖಂಡ್ರೆ

ಬೀದರ, ಮಾ.8-

ಮಹಿಳೆಯರು ಇಂದು ಶಿಕ್ಷಣ, ಉದ್ಯೋಗ, ರಾಜಕೀಯ ಹಾಗೂ ಕ್ರೀಡಾ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ತಮ್ಮ ಸಾಮರ್ಥ್ಯವನ್ನು ತೋರಿಸಿ ಸಮಾಜದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದ್ದಾರೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಹೇಳಿದರು.

ಅವರು ರವಿವಾರ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಆಯೋಜಿಸಿದ 202526ನೇ ಸಾಲಿನ ಬೀದರ ಜಿಲ್ಲಾ ಮಟ್ಟದ ಮಹಿಳಾ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರು.

ಕ್ರೀಡೆಗಳು ಮಹಿಳೆಯರ ಆರೋಗ್ಯ, ಆತ್ಮವಿಶ್ವಾಸ ಹಾಗೂ ನಾಯಕತ್ವ ಗುಣಗಳನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಇಂತಹ ಕ್ರೀಡಾಕೂಟಗಳು ಗ್ರಾಮೀಣ ಹಾಗೂ ನಗರ ಭಾಗಗಳ ಮಹಿಳೆಯರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಉತ್ತಮ ವೇದಿಕೆಯಾಗುತ್ತವೆ. ಜಿಲ್ಲೆಯ ಮಹಿಳಾ ಕ್ರೀಡಾಪಟುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಬೇಕು ಎಂದು ಸಚಿವರು ಹಾರೈಸಿದರು.

ಈ ಸಂದರ್ಭದಲ್ಲಿ ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಮ ಖಾನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಯುವಜನ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಪ್ರಕಾಶ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ಸೇರಿದಂತೆ ಅನೇಕ ಮಹಿಳಾ ಕ್ರೀಡಾಪಟುಗಳು ಉಪಸ್ಥಿತರಿದ್ದರು.

ಬಾಲ್ಯ ವಿವಾಹ: ಜಿಲ್ಲಾ, ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ತರಬೇತಿ ಕಾರ್ಯಾಗಾರ

ಕಲಬುರಗಿ,ಮಾ.09-

ಬಾಲ್ಯ ವಿವಾಹವು ಸಮಾಜಕ್ಕೆ ಅಂಟಿದ ದೊಡ್ಡ ಶಾಪವಾಗಿದೆ. ಇದನ್ನು ಕೇವಲ ಕಾನೂನಿನ ಮೂಲಕ ಮಾತ್ರವಲ್ಲದೇ, ಪೋಷಕರು ಮತ್ತು ಶಿಕ್ಷಕರಲ್ಲಿ ನೈತಿಕ ಜಾಗೃತಿ ಮೂಡಿಸುವ ಮೂಲಕ ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯ ಎಂದು ನ್ಯಾಯಮೂರ್ತಿ ಟಿ.ಎನ್. ಇನವಳ್ಳಿ ತಿಳಿಸಿದರು.

ಶನಿವಾರ ನಗರದಲ್ಲಿ ಎಚ್.ಕೆ.ಇ. ಸಂಸ್ಥೆಯ ಎಸ್.ಎ.ಸಿ ಆಡಿಟೋರಿಯಂನಲ್ಲಿ ಮಕ್ಕಳ ರಕ್ಷಣಾ ನಿರ್ದೇಶನಾಲಯ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಕರ್ನಾಟಕ ಹೈಕೋರ್ಟ್ ಕಲಬುರಗಿ ಪೀಠ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ,

ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಂಯು ಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಬಾಲ್ಯವಿವಾಹ ನಿಷೇಧ ಕಾಯ್ದೆಯ ಕುರಿತು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹ ತಡೆಗೆ ಪ್ರಬಲ ಕಾನೂನುಗಳಿವೆ. ಕಾನೂನಿನ ಅರಿವಿಲ್ಲ ಎಂಬ ಕಾರಣ ನೀಡಿ ಶಿಕ್ಷೆಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ಕಾನೂನುಬದ್ಧ



ಮದುವೆಗೆ ಹುಡುಗನಿಗೆ 21 ವರ್ಷ ಮತ್ತು ಹುಡುಗಿಗೆ 18 ವರ್ಷ ತುಂಬಿರಲೇಬೇಕು.

ಯಾವುದು ನೈತಿಕವಾಗಿ ಸರಿಯೋ ಅದು ಕಾನೂನಿನ ಪ್ರಕಾರವೂ ಸರಿಯಾಗಿರುತ್ತದೆ. ನೈತಿಕ ಜೀವನ ನಡೆಸಿದರೆ ಕೋರ್ಟ್, ಪೊಲೀಸ್ ಠಾಣೆ, ಆಸ್ಪತ್ರೆ ಮೆಟ್ಟಿಲು ಹತ್ತುವ ಅವಶ್ಯಕತೆ ಬರುವುದಿಲ್ಲ ಎಂದು ಹೇಳಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣ ಆಯೋಗದ ಸದಸ್ಯೆ ಅಪರ್ಣಾ ಎಂ. ಕೊಳ್ಳ ಮಾತನಾಡಿ, ಬಾಲ್ಯ ವಿವಾಹಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಕೇವಲ ಜಿಲ್ಲಾ ಅಥವಾ ತಾಲೂಕು ಮಟ್ಟದ ಕಣ್ಗಾವಲು ಸಾಕಾಗದು, ಗ್ರಾಮ ಪಂಚಾಯತ್ ಮಟ್ಟದಲ್ಲಿ ಹೆಚ್ಚಿನ ನಿಗಾ ಮತ್ತು ತರಬೇತಿ ಅಗತ್ಯವಿದೆ. ಬಾಲ್ಯ ವಿವಾಹ ನಿಷೇಧ ಕಾಯ್ದೆಗೆ ಇತ್ತೀಚೆಗೆ ತರಲಾದ ಪ್ರಮುಖ ತಿದ್ದುಪಡಿಗಳ ಕುರಿತು ಅಧಿಕಾರಿಗಳು ಜಾಗರೂಕರಾಗಿರಬೇಕು. ಹಿಂದೆ ಬಾಲ್ಯ ವಿವಾಹ ನಡೆದರೆ ಮಾತ್ರ ಎಫ್.ಐ.ಆರ್ ದಾಖಲಿಸಲಾಗುತ್ತಿತ್ತು. ಆದರೆ ಹೊಸ ತಿದ್ದುಪಡಿಯಂತೆ, ಬಾಲ್ಯ ವಿವಾಹಕ್ಕೆ ನಿಶ್ಚಿತಾರ್ಥ ಮಾಡಿಕೊಂಡರೂ ಅದು ಅಪರಾಧವೆಂದು ಪರಿಗಣಿಸಲ್ಪಟ್ಟು ಎಫ್.ಐ.ಆರ್ ದಾಖಲಿಸಲು ಅವಕಾಶವಿದೆ ಎಂದು ಎಚ್ಚರಿಸಿದರು.

ಗುಲಬರ್ಗಾ ಬಾರ್ ಅಸೋಸಿಯೇಶನ್ ಅಧ್ಯಕ್ಷ ರಾಜಕುಮಾರ ಎಸ್. ಕಡಗಂಚಿ, ತರಬೇತುದಾರ ರೋಹಿತ ಸಿ.ಜೆ. ಮಾತನಾಡಿದರು.

ಪುಸ್ತಕ, ಲೋಗೊ ಬಿಡುಗಡೆ: ಇದೇ ಸಂದರ್ಭದಲ್ಲಿ ಮಕ್ಕಳ ಸಹಾಯವಾಣಿ 1098 ಲೋಗೊ ಹಾಗೂ ಸುರಕ್ಷಿತ ಗ್ರಾಮ ಕಾರ್ಯಕ್ರಮದಡಿ ರೆಡ್ ಅಲರ್ಟ್ ಕಾರ್ಮಿಕ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು.

ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಪ್ರತಿಜ್ಞಾವಿಧಿ ಬೋಧಿಸಿದರು.

ಬೇಲೂರು(ಜೆ) ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳು ಬಾಲ್ಯವಿವಾಹ ತಡೆ ಜಾಗೃತಿ ನಾಟಕವನ್ನು ಪ್ರದರ್ಶಿಸಿದರು.

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ವಿಶ್ವಾರಾಧ್ಯ ಕೆ. ಇಜೇರಿ, ಡಿಸಿಪಿ ಪ್ರವೀಣ ನಾಯಕ, ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಅಧಿಕಾರಿ ಸಿದ್ದು ಪಾಟೀಲ, ಜಿಪಂ ಉಪ ಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳಾ ವಿ. ಪಾಟೀಲ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧ ಅಧಿಕಾರಿ ಶಿವಶರಣಪ್ಪ ಉಪಸ್ಥಿತರಿದ್ದರು.

ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ । ಹೊಯ್ಸಳ, ಕೆಳದಿ ಚನ್ನಮ್ಮ ಪ್ರಶಸ್ತಿ ಪಡೆದವರಿಗೆ ಸನ್ಮಾನ

ಮಹಿಳೆ ಸಬಲರಾದರೆ, ಕುಟುಂಬ, ಸಮಾಜ ಸಬಲ : ತಿಮ್ಮಾಪೂರ


ಬಾಗಲಕೋಟೆ, ಮಾ.09-

ಮಹಿಳೆ ಸಬಲರಾದಾಗ ಮಾತ್ರ ಕುಟುಂಬ ಮತ್ತು ಸಮಾಜವೂ ಸಹ ಸಬಲವಾಗುತ್ತದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ನ'ವ'ನ'ಗ'ರ'ದ' ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಸಹಭಾಗಿತ್ವ ಇಲಾಖೆಗಳ ಸಹಯೋಗದಲ್ಲಿ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿ ಹಮ್ಮಿಕೊಂಡ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಮಹಿಳೆ ಮಾನಸಿಕವಾಗಿ ಕುಗ್ಗದೇ ದೃಡಸಂಕಲ್ಪ ಹೊಂದಿ, ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಮುಂದಾಗಬೇಕು ಎಂದರು.

ಮಹಿಳಾ ಸಬಲೀಕರಣಕ್ಕಾಗಿ ಸರಕಾರ ಸಾಕಷ್ಟು ಯೋಜನೆಗಳನ್ನು ಹಾಕಿಕೊಂಡಿದೆ. ಗ್ಯಾರಂಟಿ ಯೋಜನೆಗಳ ಮೂಲಕ ಉಚಿತ ಬಸ್ ಪ್ರಯಾಣ, ಗೃಹಲಕ್ಷ್ಮೀ ಯೋಜನೆಯಡಿ ತಿಂಗಳಿಗೆ 2 ಸಾವಿರ ರೂ. ಹಾಗೂ ಸ್ವಾವಲಂಭಿ ಜೀವನಕ್ಕೆ ಅಕ್ಕಪಡೆ ಸೇರಿದಂತೆ ಅನೇಕ ಯೋಜನೆಗಳು ಮಹಿಳೆಯರ ಸ್ವಾವಲಂಭಿ ಬದುಕಿಗೆ ಅನುಕೂಲವಾಗಿವೆ. ಒಂದು ಕಾಲದಲ್ಲಿ ಮಹಿಳೆ ತನ್ನ ತವರು ಮನೆಗೆ ಹೋಗಬೇಕೆಂದರೆ ದುಡ್ಡು ಇರುತ್ತಿರಲಿಲ್ಲ. ಉಚಿತ ಬಸ್ ಪ್ರಯಾಣದಿಂದ ಸಾದ್ಯವಾಗಿದೆ ಎಂದು ತಿಳಿಸಿದರು.

ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ ಮಾತನಾಡಿ ಗಂಡು ಮತ್ತು ಹೆಣ್ಣು ಒಂದು ನಾಣ್ಯದ ಎರಡು ಮುಖಗಳಿದ್ದಂತೆ, ಇವರಿಬ್ಬರೂ ಸಮಾನರಾಗಿದ್ದಾಗ ಮಾತ್ರ ಬದುಕು ಸಾಗಿಸಲು ಸಾಧ್ಯವಾಗುತ್ತದೆ. ಹೆಣ್ಣು ಗೌರವದ ಪ್ರತೀಕವಾಗಿದ್ದು, ಹೆಣ್ಣನ್ನು ಭಾರತ ಮಾತೆಗೆ ಹೋಲಿಸುತ್ತಾರೆ. ಎಲ್ಲ ಮಹಿಳೆಯರಿಗೆ ಸ್ಥಾನಮಾನ ಇಲ್ಲವೋ ಅಲ್ಲಿ ಅಭಿವೃದ್ದಿ ಕುಂಟಿತಗೊಂಡಿರುತ್ತದೆ. ಮಹಿಳೆಯರಿಗೆ ಸಮಾನ



ಅವಕಾಶ, ಶಿಕ್ಷಣ, ಆರೋಗ್ಯ ಮತ್ತು ಸುರಕ್ಷತೆ ಒದಗಿಸಿದಾಗ ಮಾತ್ರ ನಿಜವಾದ ಅಭಿವೃದ್ಧಿ ಸಾಧ್ಯವೆಂದರು.

ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ ಮಹಿಳೆ ಎಂದರೆ ಒಂದು ವ್ಯಕ್ತಿ ಮಾತ್ರವಲ್ಲ, ಅವಳು ತಾಯಿ, ಸಹೋದರಿ, ಪತ್ನಿ, ಶಿಕ್ಷಕಿ ಮತ್ತು ಸಮಾಜದ ಮಾರ್ಗದರ್ಶಕಿ ಕೂಡಾ ಆಗಿದ್ದಾಳೆ, ಕುಟುಂಬದ ಬೆಳವಣಿಗೆಗೂ, ಸಮಾಜದ ಅಭಿವೃದ್ದಿಗೂ ಮಹಿಳೆಯರ ಪಾತ್ರ ಅತೀ ಮಹತ್ವರವಾಗಿದೆ. ಇಂದು ಮಹಿಳೆ ಪ್ರತಿಯೊಂದು ಕ್ಷೇತ್ರದಲ್ಲಿ ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿದ್ದಾರೆ. ಮಕ್ಕಳಿಗೆ ಶಿಕ್ಷಣ ಮುಖ್ಯವಾಗಿರಬೇಕು ಅಂದಾಗ ಮಾತ್ರ ಅಭಿವೃದ್ದಿ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅನೀಲಕುಮಾರ ದಡ್ಡಿ ಮಾತನಾಡಿ, ಮಹಿಳೆಯರಿಗೆ ಸಮಾನವಾದ ಅವಕಾಶ, ಶಿಕ್ಷಣ, ಆರೋಗ್ಯ ಮತ್ತು ಸುರಕ್ಷತೆ ಒದಗಿಸಿದಾಗ ಮಾತ್ರ ನಿಜವಾದ ಅಭಿವೃದ್ದಿ ಸಾಧ್ಯ. ಈ ನಿಟ್ಟಿನಲ್ಲಿ ಮಹಿಳೆಯರ ಹಕ್ಕು ಮತ್ತು ಸಮಾನತೆ ಬಗ್ಗೆ ಬೆಳಕು ಚೆಲ್ಲಬೇಕಿದೆ. ಮಹಿಳೆಯರ ಗೌರವ ಮತ್ತು ಸಮಾನತೆ ಕಾಪಾಡುವ ಸಮಾಜ ನಿರ್ಮಾಣವಾಗಲಿ ಎಂದು ಆಶಿಸುತ್ತೇನೆ ಎಂದರು.

ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ನವನಗರದ ಮಹಿಳಾ ಪೊಲೀಸ್ ಠಾಣೆಯ ಡಿಎಸ್‌ಪಿ ಗಿರೀಶ ಭೋಜನ್ನವರ ಮಹಿಳೆಯರಿಗಾಗಿ ಸೈಬರ್ ಸುರಕ್ಷತೆ, ಕೃಷಿ ವಿಜ್ಞಾನ ಕೇಂದ್ರದ ತಜ್ಞೆ ಡಾ.ರಮೀತ ಬಿ.ಈ ಮಹಿಳೆಯರಲ್ಲಿ ಮಾನಸಿಕ ಒತ್ತಡ ನಿರ್ವಹಣೆ ಹಾಗೂ ಪೌಷ್ಠಿಕ ಆಹಾರ ಕುರಿತು ಉಪನ್ಯಾಸ ನೀಡಿದರು. ಪ್ರಾರಂಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಬೇಟಿ ಬಚಾವೋ, ಬೇಟಿ ಪಡಾವೋ ಯೋಜನೆಯ ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸಿದ ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ, ಯೋಜನಾ ನಿರ್ದೇಶಕ ಮಂಜುನಾಥ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಡಾ.ವೀಣಾ, ಸೇರಿದಂತೆ ಆಯಾ ತಾಲೂಕಿನ ಶಿಶು ಅಭಿವೃದ್ದಿ ಯೋಜನಾಧಿಕಾರಿಗಳು ಉಪಸ್ಥಿತರಿದ್ದರು.

ಹೊಯ್ಸಳ, ಕೆಳದಿ ಚೆನ್ನಮ್ಮ ಪ್ರಶಸ್ತಿ ವಿಜೇತರಿಗೆ ಸನ್ಮಾನ ಜಿಲ್ಲಾ ಮಟ್ಟದ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಪಡೆದ ಸಂಗಮೇಶ ತೋಳಮಟ್ಟಿ, ನಂದಿನಿ ಲಮಾಣಿ (ಕ್ರೀಡೆ-ಸೈಕ್ಲಿಂಗ್) ಅನಘಾ ಪಾಟೀಲ (ಕಲೆ-ಸಂಗೀತ), ಚಿದಾನಂದ ಜವಳಗಿ (ನಾವಿನ್ಯತೆ) ಇವರನ್ನು ಸನ್ಮಾನಿಸಲಾಯಿತು.

47.50 ಕೋಟಿ ರೂ. ವೆಚ್ಚದ ಸಣ್ಣ ನೀರಾವರಿ ಕಾಮಗಾರಿಗಳಿಗೆ ಸಚಿವ ಭೋಸರಾಜು ಅಡಿಗಲ್ಲು

ಆಳಂದ,ಮಾ.10-

ತಾಲೂಕಿನ ರೈತರ ಕೃಷಿಗೆ ನೀರಿನ ಸಿಂಚನ ಒದಗಿಸುವ ಮಹತ್ವದ ಹೆಜ್ಜೆಯಾಗಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯಡಿ 202526ನೇ ಸಾಲಿನ 4702 ಎಪಿಬಿ ಯೋಜನೆಯಡಿ ಕೈಗೆತ್ತಿಕೊಳ್ಳಲಾದ ಐದು ಪ್ರಮುಖ ಕಾಮಗಾರಿಗಳಿಗೆ ಒಟ್ಟು 47.50 ಕೋಟಿ ರೂ. ವೆಚ್ಚದಲ್ಲಿ ಶಂಕುಸ್ಥಾಪನೆ ನೆರವೇರಿಸಲಾಯಿತು. ಕಾರ್ಯಕ್ರಮಕ್ಕೆ ಸಣ್ಣ ನೀರಾವರಿ ಇಲಾಖೆಯ ಸಚಿವ ಎನ್.ಎಸ್.ಭೋಸರಾಜು ಚಾಲನೆ ನೀಡಿದರು.

ಪಟ್ಟಣದ ಎಪಿಎಂಸಿ ಆವರಣದಲ್ಲಿ ಹೊಸ ಬಸ್ ನಿಲ್ದಾಣದ ಸಮೀಪದಲ್ಲಿ ನಡೆದ ಸಮಾರಂಭದಲ್ಲಿ ಯೋಜನೆಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರತಿ ಯೋಜನೆಗೂ ಸುಮಾರು 9.50 ಕೋಟಿ ರೂ. ವೆಚ್ಚ ನಿಗದಿಪಡಿಸಲಾಗಿದ್ದು, ತಾಲೂಕಿನ ವಿವಿಧ ಗ್ರಾಮಗಳಲ್ಲಿ ಕಾಮಗಾರಿಗಳು ಜಾರಿಗೊಳ್ಳಲಿವೆ ಎಂದರು.

ಈ ಯೋಜನೆಗಳ ಅನುಷ್ಠಾನದಿಂದ ಸುಮಾರು 2,000 ಹೆಕ್ಟೇರ್ ಕೃಷಿಭೂಮಿ ನೀರಾವರಿ ಸೌಲಭ್ಯಕ್ಕೆ ಒಳಪಡುವುದರಿಂದ ರೈತರ ಕೃಷಿ ಚಟುವಟಿಕೆಗಳಿಗೆ ಮಹತ್ತರ ಉತ್ತೇಜನ ಸಿಗಲಿದೆ ಎಂದು ಸಚಿವರು ತಿಳಿಸಿದರು.

ಯೋಜನೆಯಡಿ ಅಣೆಕಟ್ಟು ನಿರ್ಮಾಣ, ನಾಲೆಗಳ ಅಗೆತ ಹಾಗೂ ನೀರಿನ ಹರಿವು ಸುಧಾರಣೆ ಸೇರಿದಂತೆ ಹಲವು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಖಂಡಾಳ ಗ್ರಾಮದಿಂದ ಮಟಕಿ ನಾಲೆಯವರೆಗೆ ಅಡ್ಡಲಾಗಿ ಅಣೆಕಟ್ಟು ನಿರ್ಮಾಣ, ಬಿಸಿಐಗಳ ನಿರ್ಮಾಣ ಮತ್ತು ನಾಲೆ ಅಗೆತ ಕಾಮಗಾರಿ ನಡೆಯಲಿದೆ. ಇದರಿಂದ ಮಧ್ಯಭಾಗದ ರೈತರಿಗೆ ತಕ್ಷಣದ ಪ್ರಯೋಜನ ದೊರೆಯಲಿದೆ ಎಂದು ಹೇಳಿದರು.

ಇದೇ ವೇಳೆ ನಿರಗುಡಿಪಡಸಾವಳಿ ನಾಲೆಯವರೆಗೆ ಐಸಿಐಗಳ ನಿರ್ಮಾಣದೊಂದಿಗೆ ನೀರಿನ ಹರಿವು ಸುಧಾರಣೆ ಕಾಮಗಾರಿ



ಕೈಗೆತ್ತಿಕೊಳ್ಳಲಾಗಿದೆ. ಬಸವಂತವಾಡಿ ಗ್ರಾಮದಿಂದ ನಿಂಬರ್ಗಾ ನಾಲೆಯವರೆಗೆ ಅಣೆಕಟ್ಟು ನಿರ್ಮಾಣದ ಮೂಲಕ ದಕ್ಷಿಣ ಭಾಗದ ರೈತರ ಭೂಮಿಗಳಿಗೆ ನೀರಿನ ಲಭ್ಯತೆ ಹೆಚ್ಚಾಗಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರು ಹಾಗೂ ಕ್ಷೇತ್ರದ ಶಾಸಕ ಬಿ.ಆರ್.ಪಾಟೀಲ್ ರೈತರಿಗೆ ಸಮರ್ಪಕ ನೀರಾವರಿ ಸೌಲಭ್ಯ ಒದಗಿಸುವುದು ಸರ್ಕಾರದ ಮುಖ್ಯ ಗುರಿಯಾಗಿದೆ. ರೈತರಿಗೆ ನೀರಾವರಿ ದೊರೆತರೆ ಅದಕ್ಕಿಂತ ದೊಡ್ಡ ನೆರವು ಇನ್ನಿಲ್ಲ ಎಂದು ಹೇಳಿದರು.

ಜಿಡಗಾ ಶ್ರೀಮಠದ ಕೆರೆ ನಿರ್ಮಾಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಜೆಟ್‌ನಲ್ಲಿ 25 ಕೋಟಿ ರೂ. ಅನುದಾನ ಘೋಷಿಸಿರುವುದನ್ನು ಉಲ್ಲೇಖಿಸಿದ ಅವರು, ಅಂತರ್ಜಲ ಮಟ್ಟ ಹೆಚ್ಚಿಸಲು ಇನ್ನೂ 100 ಕೋಟಿ ಅನುದಾನ ನೀಡುವಂತೆ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದರು.

ಪಟ್ಟಣದಲ್ಲಿ ರೈತರ ಬೆಳೆ ಸಂರಕ್ಷಣೆಗೆ ಶೀತಗೃಹ (ಕೋಲ್ಡ್ ಸ್ಟೋರೇಜ್) ನಿರ್ಮಿಸಬೇಕು. ಜೊತೆಗೆ ಎಪಿಎಂಸಿ ಮಾರುಕಟ್ಟೆಯ ಅಭಿವೃದ್ಧಿ ಹಾಗೂ ಸುಧಾರಣೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಮಾದನಹಿಪ್ಪರಗಾ ಶ್ರೀ ಶಿವಲಿಂಗೇಶ್ವರ ವಿರಕ್ತ ಮಠದ ಶ್ರೀ ಅಭಿನವ ಶಿವಲಿಂಗ ಮಹಾಸ್ವಾಮಿಗಳು ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಇಲಾಖೆಯಿಂದ 20 ಮಹಿಳೆಯರಿಗೆ ಹೊಲಿಗೆ ಯಂತ್ರಗಳು ಹಾಗೂ 30 ವಿಕಲಚೇತನರಿಗೆ ತ್ರಿಚಕ್ರ ವಾಹನಗಳನ್ನು ಸಚಿವರು ಹಾಗೂ ಶಾಸಕರು ವಿತರಿಸಿದರು.

ಇಲಾಖೆ ರಾಜ್ಯ ಕಾರ್ಯದರ್ಶಿ ಬಿ.ಕೆ. ಪವಿತ್ರಾ, ಮುಖ್ಯ ಇಂಜಿನಿಯರ್ ಹೆಚ್ ಎಲ್. ವೆಂಕಟೇಶ, ಅಧೀಕ್ಷಕ ಸುಭಾಷ ಎಲ್. ಶಿಕ್ಷಣಕರ್, ಅಭಿಯಂತರ ನಾಗನಗೌಡ ವಾಯ್. ಭಾವಿ ಮತ್ತು ಸಹಾಯಕ ಅಭಿಯಂತರ ಶಾಂತಪ್ಪ ಎಸ್. ಜಾಧವ, ಗುತ್ತಿಗೆದಾರ ಎನ್.ವಿ.ಕುಲಕರ್ಣಿ ಆಗಮಿಸಿದ್ದರು.

ವೇದಿಕೆಯಲ್ಲಿ ಪಂಚಗ್ಯಾರೆಂಟಿ ಸಮಿತಿ ಅಧ್ಯಕ್ಷ ಶಿವಪುತ್ರಪ್ಪ ಪಾಟೀಲ, ಡಿಸಿಸಿ ನಿರ್ದೇಶಕ ಅಶೋಕ ಸಾವಳೇಶ್ವರ, ತಾಪಂ ಮಾಜಿ ಅಧ್ಯಕ್ಷ ಬಸವರಾಜ ಪವಾಡಶೆಟ್ಟಿ, ಮೋಹನಗೌಡ ಪಾಟೀಲ, ಹಾಪ್‌ಕಾಮ್ ಅಧ್ಯಕ್ಷ ಗುರುಶಾಂತ ಪಾಟೀಲ ನಿಂಬಾಳ, ಕೃಷಿಕ ಸಮಾಜ ಅಧ್ಯಕ್ಷ ಗುರುಶರಣ ಪಾಟೀಲ ಕೊರಳ್ಳಿ, ತುಕಾರಾಮ ವಗ್ಗೆ, ಶಂಕರರಾವ್ ದೇಶಮುಖ, ಶರಣು ಭೂಸನೂರ, ಮಲ್ಲಪ್ಪ ಹತ್ತರಕಿ, ರಾಜಶೇಖರ ಪಾಟೀಲ ಚಿತಲಿ, ದಯಾನಂದ ಶೇರಿಕಾರ, ಪಾಶಾ ಗುತ್ತೇದಾರ, ಸುಭಾಷ ಫೌಜಿ, ಇಬ ಮಾನಪ್ಪ ಕಟ್ಟಿಮನಿ, ಡಿವೈಎಸ್‌ಪಿ ತಮರಾಮ ಪಾಟೀಲ ಮತ್ತಿತರರು ಉಪಸ್ಥಿತರಿದ್ದರು.

ಜಿಪಂ ಮಾಜಿ ಸದಸ್ಯ ಸಿದ್ಧರಾಮ ಪ್ಯಾಟಿ ಸ್ವಾಗತಿಸಿದರು. ರಾಜಶೇಖರ ಪಾಟೀಲ ನಿರೂಪಿಸಿದರು.

ಒಂದನೇಯ ಪುಟದಿಂದ

ಅಂಬೇಡ್ಕರ್ ವೃತ್ತದಲ್ಲಿ ಛಲವಾದಿ ಮಹಾಸಭಾದಿಂದ ಪ್ರತಿಭಟನೆ

ಹಳೆಯ ಮೀಸಲಾತಿ ಮುಂದುವರಿಸಲು ಒತ್ತಾಯ

ರೋಸ್ಟರ್ ಬಿಂದು ನಿಯಮವನ್ನು ಅಳವಡಿಸಿಕೊಂಡು ಮುಂದುವರಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಛಲವಾದಿ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ವಿಶ್ವನಾಥ ಪಟ್ಟಿ, ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ವಿಜಯ ಪ್ರಸಾದ ಪಿ., ಎಂ. ವಸಂತ, ವಕೀಲ ಹನುಮಂತಪ್ಪ, ಜಗನಾಥ, ವಕೀಲ ತಮ್ಮಣ್ಣ, ಶಿವುಕುಮಾರ, ಯಲ್ಲಪ್ಪ, ಪ್ರಕಾಶ, ಚಂದ್ರಶೇಕರ, ಸುರೇಶ ಪಟ್ಟಿ ಹಾಗೂ ಛಲವಾದಿ ಸಮಾಜದ ಮುಖಂಡರು ಪಾಲ್ಗೊಂಡಿದ್ದರು.

ದೇಶದ ಏಕತೆ ಕಾಪಾಡಲು ಎಲ್ಲ ಧರ್ಮೀಯರು ಒಗ್ಗಟ್ಟಾಗಬೇಕು: ಸಲೀಂ ಅಹ್ಮದ್

ಮಾತನಾಡಿದರು.

ಕಾರ್ಯಕ್ರಮದಲ್ಲಿ ಮಹಾರಾಷ್ಟ್ರದ ನೀಲಂಗ ಶರೀಫ್‌ನ ಸೈಯದ್ ಹೈದರ್ ಅಲಿ ಹುಸೇನಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಮುಖಂಡರಾದ ಸಜ್ಜಾದ್ ಹುಸೇನಿ ಮಾನ್ವಿ, ಸೈಯದ್ ಬಾಬರ್ ಪಾಷಾ ಜಾಗೀರ್ ದಾರ್, ಮೆಹಬೂಬ್ ಪೀರ್ ಖಾದ್ರಿ, ಸಂಜಯ್ ಪಾಟೀಲ್, ರಜಾಕ್ ಉಸ್ತಾದ್, ಅಸ್ಲಂಪಾಷಾ ರಾಯಚೂರು, ಅಶೋಕ ಉಮಲೂಟಿ, ಮೆಹಬೂಬ್ ಮುಲ್ಲಾ, ಮೌಲಾನಾಗಳಾದ ಮೆಹರಾಜ್ ಖಾದ್ರಿ, ತಾಜುಮುದ್ದೀನ್ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಟ್ರಂಪ್ ಒಬ್ಬ ಸರ್ವಾಧಿಕಾರಿ, ಮೋದಿ ಅವರ ಗುಲಾಮ : ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ



ಕಲಬುರಗಿ,ಮಾ.09-

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಒಬ್ಬ ಸರ್ವಾಧಿಕಾರಿ, ನರೇಂದ್ರ ಮೋದಿ ಅವರ ಗುಲಾಮರಾಗಿದ್ದಾರೆ ಎಂದು ರಾಜ್ಯಸಭೆ ವಿರೋಧ ಪಕ್ಷದ ನಾಯಕ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ತೀವ್ರವಾಗಿ ವಾಗ್ದಾಳಿ ನಡೆಸಿದ್ದಾರೆ.

ರವಿವಾರ ಚಿತ್ತಾಪುರ ಪಟ್ಟಣದಲ್ಲಿ 1069 ಕೋಟಿ ರೂ. ವೆಚ್ಚದ ಕಾಮಗಾರಿಗಳಿಗೆ ಅಡಿಗಲ್ಲು ಹಾಗೂ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ರಷ್ಯಾದಿಂದ ಈಗ ಒಂದು ತಿಂಗಳಿಗೆ ಮಾತ್ರ ತೈಲ ಖರೀದಿಗೆ ಅಮೆರಿಕ ಅನುಮತಿ ನೀಡಿದೆ. ಅಮೇರಿಕದವರು ಹೇಳಿದಂತೆ ಮೋದಿ ಕೇಳುತ್ತಿದ್ದಾರೆ. ಟ್ರಂಪ್ ಜೊತೆ ಸ್ನೇಹ ಮಾಡಿಕೊಂಡು ಮೋದಿ ನಮ್ಮ ದೇಶವನ್ನೇ ಗಿರಿವಿ ಇಟ್ಟಿದ್ದಾರೆ ಎಂದು ಖರ್ಗೆ ಆಕ್ರೋಶ ವ್ಯಕ್ತಪಡಿಸಿದರು.

ಪ್ರಧಾನಿ ನರೇಂದ್ರ ಮೋದಿ ತಮ್ಮ ವಿದೇಶಾಂಗ ನೀತಿಯಿಂದಾಗಿ ನಮ್ಮ ದೇಶವನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಹಾಳುಮಾಡುತ್ತಿದ್ದಾರೆ. ಕಾಂಗ್ರೆಸ್ ಅಧಿಕಾರದ 75 ವರ್ಷ ಆದರೂ ಕೂಡಾ ನಮ್ಮ ದೇಶದ ತಂಟೆಗೆ ಯಾರೂ ಬಂದಿರಲಿಲ್ಲ. ಪಾಕಿಸ್ತಾನವನ್ನು ಒಡೆದು ಎರಡು ಭಾಗ ಮಾಡಿದರು. ಅವರಿಗೆ ಇದ್ದಂತ ಧೈರ್ಯ ನಿಮಗೇಕಿಲ್ಲ? ಎಂದು ಅವರು ಪ್ರಶ್ನಿಸಿದರು.

ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ದದ ಬಗ್ಗೆ ಪ್ರಸ್ತಾಪಿಸಿದ ಮಲ್ಲಿಕಾರ್ಜುನ ಖರ್ಗೆ, ಜವಾಹರ್ ಲಾಲ್ ನೆಹರು ಪ್ರಧಾನಿಯಾಗಿದ್ದಾಗ ಅಲಿಪ್ತ ನೀತಿ ಅಳವಡಿಸಿಕೊಂಡಿದ್ದರಿಂದ ಅದು ವಿಶ್ವಶಾಂತಿಗೆ ಕಾರಣವಾಗಿತ್ತು. ಆದರೆ, ಮೋದಿ ಈಗ ಮಾಡುತ್ತಿರುವುದೇನು? ಮೋದಿ ಇಸ್ರೇಲ್‌ಗೆ ಹೋಗಿ ಬಂದ ನಂತರ ಅದು ಇರಾನ್ ಮೇಲೆ ಬಾಂಬ್ ಹಾಕಿತು. ದೇಶದ ಮುಖ್ಯಸ್ಥ ಖಾಮಿನೈಯನ್ನು ಅಮೆರಿಕದವರು ಹತ್ಯೆ ಮಾಡಿದರು. ಒಂದು ದೇಶದ ಮುಖ್ಯಸ್ಥನನ್ನು ಹತ್ಯೆ ಮಾಡಿದರೆ, ಆ ದೇಶ ಶಾಂತಿಯಿಂದ ಇರುತ್ತದೆಯೇ? ಇದು ವಿಶ್ವಶಾಂತಿಯಿಂದ ಇರಲು ಸಾಧ್ಯವಾಗುತ್ತದೆಯಾ? ಎಂದು ಖರ್ಗೆ ಪ್ರಶ್ನಿಸಿದರು.

ಟ್ರಂಪ್ ನನ್ನ ಸ್ನೇಹಿತ ಎನ್ನುತ್ತಾರೆ. ಆದರೆ, ರಷ್ಯಾದಿಂದ ತೈಲ ಖರೀದಿ ಮಾಡಿದರೆ, ನಿಮ್ಮ ಮೇಲೆ ಟ್ಯಾಕ್ಸ್ ಹಾಕುತ್ತೇನೆ ಟ್ರಂಪ್ ಹೇಳುತ್ತಾರೆ. ಟ್ರಂಪ್ ಜೊತೆ ದಿನಾಲೂ ಮಾತನಾಡುತ್ತಿರುವುದಾಗಿ ಮೋದಿ ಹೇಳುತ್ತಾರೆ. ಟ್ಯಾಕ್ಸ್ ಹಾಕುವ ಬಗ್ಗೆನೇ ಮಾತನಾಡುತ್ತಾರಾ? ಎಫ್‌ಸ್ಟೀನ್ ಫೈಲ್‌ನಲ್ಲಿ ಮೋದಿ ಹೆಸರಿದೆ ಎನ್ನಲಾಗುತ್ತಿದೆ. ಅದನ್ನು ಇಟ್ಟುಕೊಂಡೇ ಟ್ರಂಪ್ ಮೋದಿಗೆ ಹೆದರಿಸುತ್ತಿದ್ದಾರೆ ಎಂದರು.

ಬಿಜೆಪಿಯವರಿಗಂತೂ ಕೆಲಸವೇ ಇಲ್ಲ. ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಪ್ರಿಯಾಂಕ್, ಸಿದ್ದರಾಮಯ್ಯಗೆ ಹಾಗೂ ಶಿವಕುಮಾರ್‌ಗೆ ಬೈಯ್ಯುವುದೇ ಕೆಲಸವಾಗಿದೆ. ನಮ್ಮ ಸರಕಾರ ಇದ್ದಾಗ ಮಾಡಿರುವ ಕೆಲಸಗಳ ಬಗ್ಗೆ ಎಲ್ಲರಿಗೂ ಗೊತ್ತಿದೆ. ಗದಗ ವಾಡಿ ರೈಲ್ವೆ ಲೈನ್, ರಸ್ತೆಗಳು, ಹೈವೈ ಗಳು ಮಾಡಿದ್ದು ನಾವೇ ಹೊರತು; ನೀವಲ್ಲ ಎಂದು ಬಿಜೆಪಿ ವಿರುದ್ದ ವಾಗ್ದಾಳಿ ನಡೆಸಿದರು.

ಆರ್ಟಿಕಲ್ 371 ಜೆ ಜಾರಿಗೆ ತಂದಿದ್ದು ನಾವು. ನಮ್ಮ ಬೇಡಿಕೆಗೆ ಅಂದಿನ ಗೃಹ ಸಚಿವ ಅಡ್ವಾಣಿ ಸ್ಪಂದಿಸಲಿಲ್ಲ, ಎಂದು ಅಂದಿನ ಬಿಜೆಪಿಯ ಪ್ರತಿರೋಧವನ್ನು ನೆನಪಿಸಿಕೊಂಡ ಖರ್ಗೆ, ನಾನು ಅಂದಿನ ಸಂದರ್ಭದಲ್ಲಿ ನಮ್ಮ ಪರವಾಗಿರಲು 130 ಜನ ಎಂ.ಪಿಗಳಿಗೆ ಹೇಗೆ ಮನವೊಲಿಸಿದ್ದೇನೆ ಎಂದು ಅದು ನನಗೆ ಮಾತ್ರ ಗೊತ್ತು. ಆರ್ಟಿಕಲ್ 371 (ಜೆ) ನನಗೆ, ನನ್ನ ಮಕ್ಕಳಿಗೆ ಹಾಗೂ ಮೊಮ್ಮಕ್ಕಳಿಗೆ ಅನುಕೂಲವಾಗಲ್ಲ. ಅದು ಅನುಕೂಲವಾಗುವುದು ಜನಸಾಮಾನ್ಯರಿಗೆ. ಇಂದು ಮೆಡಿಕಲ್, ಇಂಜಿನಿಯರಿಂಗ್ ಸೀಟು ಪಡೆದುಕೊಳ್ಳಲು ಅನುಕೂಲವಾಗಿದೆ ಎಂದರು.

ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಶಿವಕುಮಾರ್ ಚೆನ್ನಾಗಿ ಕೆಲಸ ಮಾಡುತ್ತಿದ್ದಾರೆ. ಅವರಿಗೆ ನೀವು ಸದಾ ಬೆಂಬಲ ನೀಡಬೇಕು ಎಂದು ಮನವಿ ಮಾಡಿದ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಗೆ ಇನ್ನು ಇಪ್ಪತ್ತು ಸೀಟು ಬಂದಿದ್ದರೆ, ಮೋದಿ ಅಧಿಕಾರಕ್ಕೆ ಬರುತ್ತಿರಲಿಲ್ಲ. ನಮ್ಮ ನಿರೀಕ್ಷೆಯಂತೆ ಸೀಟು ಬರಲಿಲ್ಲ. ಅದು ನಮ್ಮ ದುರ್ದೈವ. ನಮ್ಮ ಸೋಲನ್ನು ಬಿಜೆಪಿಯವರು ಟೀಕಿಸುತ್ತಾರೆ. ಆದರೆ, ನಾವು ಜನರ ಪ್ರೀತಿ ವಿಶ್ವಾಸದಿಂದ ಮುಂದುವರೆಯುತ್ತೇವೆ ಎಂದರು.

ದೇಶದ ಯುವಕರಲ್ಲಿ ಜಗಳ ಹಚ್ಚುವುದು ಹಾಗೂ ದ್ವೇಷ ಹರಡುವುದೇ ಬಿಜೆಪಿ - ಆರೆಸ್ಸೆಸ್ ನವರ ಕೆಲಸವಾಗಿದೆ. ಶ್ರೀಮಂತರು ಹೇಗೋ ಬಚಾವಾಗುತ್ತಾರೆ. ಬಡವರು ಎಲ್ಲಿಗೆ ಹೋಗಬೇಕು? ಬಿಜೆಪಿ ಹಾಗೂ ಆರೆಸ್ಸೆಸ್ ನ ಕೆಲವರು ಬ್ರಿಟಿಷರ ಕೆಳಗೆ ಕೆಲಸ ಮಾಡುತ್ತಿದ್ದವರು. ಅವರು ದೇಶದ ಸ್ವಾತಂತ್ರ್ಯಕ್ಕಾಗಿ ಹನಿ ರಕ್ತ ಹರಿಸಿಲ್ಲ. ನಮ್ಮನ್ನು ಟೀಕಿಸುವವರು ಬಿಜೆಪಿ ಹಾಗೂ ಆರೆಸ್ಸೆಸ್ ನವರು. ಅವರ ಬಗ್ಗೆ ನೀವು ಎಚ್ಚರದಿಂದ ಇರಬೇಕು. ಅವರ ಮಾತಿಗೆ ಮರುಳಾಗಬಾರದು ಎಂದು ಮಲ್ಲಿಕಾರ್ಜುನ್ ಖರ್ಗೆ ಎಚ್ಚರಿಸಿದರು.

ಲಿಂಗದಹಳ್ಳಿ ಪರಮಾನಂದ ದೇವಸ್ಥಾನದಲ್ಲಿ 35 ಜೋಡಿ ಸಾಮೂಹಿಕ ವಿವಾಹ



ಜಾಲಹಳ್ಳಿ ಮಾ.08:-

ಇಲ್ಲಿಗೆ ಸಮೀಪವಿರುವ ಲಿಂಗದಹಳ್ಳಿ ಪರ ಶ್ರೀ ಪರಮಾನಂದ ದೇವಸ್ಥಾನದಲ್ಲಿ ದಿನಾಂಕ 8.3.2026 ರಂದು ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಲಿಂಗದಹಳ್ಳಿ ಗ್ರಾಮದಲ್ಲಿ ಶ್ರೀ ಪರಮಾನಂದ ದೇವಸ್ಥಾನ ಜನ ಕಲ್ಯಾಣ ಟ್ರಸ್ಟ್ ಹೊರನಾಡು ಶ್ರೀ ಅನ್ನಪೂರ್ಣೇಶ್ವರಿ ವಿವಿಧೋದೇಶ ಸೌಹಾರ್ದ ಸಹಕಾರಿ ಸಂಘ ನಿಯಮಿತ ದೇವದುರ್ಗ ಹಾಗೂ ಸುಕ್ಷೇತ್ರ ಲಿಂಗದಹಳ್ಳಿ ಶ್ರೀ ಪರಮಾನಂದ ದೇವಸ್ಥಾನ ಸದ್ಭಕ್ತರು ಸಹಯೋಗದೊಂದಿಗೆ ಶ್ರೀ ಪರಮಾನಂದ ದೇವಸ್ಥಾನ ಲಿಂಗದಹಳ್ಳಿಯಲ್ಲಿ 35 ಜೋಡಿ ಸಾಮೂಹಿಕ ವಿವಾಹ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮಕ್ಕೆ ಆಗಮಿಸಿದ ಪೂಜ್ಯರು ದಿವ್ಯ ಸಾನಿಧ್ಯ: ಶ್ರೀ ಷ.ಬ್ರ. ವಿದ್ಯಾಮಾನ್ಯ ಶಿವಾಭಿನವ ಶಿವಾಚಾರ್ಯರತ್ನ ಜಯ ಶಾಂತಲಿಂಗೇಶ್ವರ ಶಿವಾಚಾರ್ಯರು ಬೃಹನ್ಮಠ ಜಾಲಹಳ್ಳಿ ಮಾತನಾಡಿ ಸಾಮೂಹಿಕ ವಿವಾಹ ಕಾರ್ಯಕ್ರಮದಿಂದ ದುಂದು ವೆಚ್ಚಕ್ಕೆ ಕಡಿವಾಣ ಹಾಕಿದಂತಾಗುತ್ತದೆ ಹಾಗೂ ಜನಸಾಮಾನ್ಯರಿಗೆ ಅನುಕೂಲವಾಗುತ್ತದೆ ಅಂತ ಹೇಳಿದರು.

ಶ್ರೀ ಪರಮಾನಂದ ಜನ ಕಲ್ಯಾಣ ಟ್ರಸ್ಟ್ ಲಿಂಗದಳ್ಳಿ ಇವರು ಪ್ರತಿ ವರ್ಷ ಯಶಸ್ವಿಯಾಗಿ ಸಾಮೂಹಿಕ ವಿವಾಹ ಕಾರ್ಯಕ್ರಮ ನಡೆಸಿಕೊಳ್ಳುತ್ತಿರುವುದು ಶ್ಲಾಘನೀಯವಾಗಿದೆ ಎಂದು ಹೇಳಿದರು

ಸಾನಿಧ್ಯ: ಶ್ರೀಷ. ಬ್ರ.ಶಿವಮೂರ್ತಿ ಶಿವಾಚಾರ್ಯರು ಜಡಿ ಶಾಂತೇಶ್ವರ ಮಠ ದೇವಪುರ ಮತ್ತು ಬಬಲಾದಿ ಮಠ ಕಲಬುರ್ಗಿ ಶ್ರೀ ಷ. ಬ್ರ.ಶಂಭು ಸೋಮನಾಥ ಶಿವಾಚಾರ್ಯರು ಬ್ರಹನ್ಮಠ ಸುಲ್ತಾನಪುರ ಶ್ರೀ ಷ. ಬ್ರ.ಚನ್ನಬಸವ ಶಿವಾಚಾರ್ಯರು ಸಂಸ್ಥಾನ ಹಿರೇಮಠ ಕೆಂಭಾವಿ ಶ್ರೀ ಷ. ಬ್ರ. ಮಲ್ಲಿಕಾರ್ಜುನ ಶಿವಾಚಾರ್ಯರು ಶ್ರೀ ಗಿರಿ ಸಂಸ್ಥಾನ ಮಠ ಲಕ್ಷ್ಮೀಪುರ ಶ್ರೀ ಪರಮಪೂಜ್ಯ ಮರಿ ಹುಚ್ಚೇಶ್ವರ ಸ್ವಾಮಿಗಳು ರಾಮಲಿಂಗೇಶ್ವರ ಮಠ ಗುಳುಬಾಳು ಶ್ರೀ ಗುರು ಕುಮಾರೇಶ್ವರ ಸ್ವಾಮಿಗಳು ಕನ್ನೂರು ಹಿರೇಮಠ ದೇವದುರ್ಗ ಶ್ರೀ ಪರಮ ಪೂಜ್ಯ ಅಡವಿ ಲಿಂಗ ಮಹಾರಾಜರು ಶ್ರೀ ಮೌನೇಶ್ವರ ಆಸನ ಕಟ್ಟಿ ವೀರಗೋಟ ಶ್ರೀ ಪರಮಪೂಜ್ಯ ಗುರುಬಸವ ರಾಜ ಗುರುಗಳು ಮಲದಕಲ ಶ್ರೀ ಮಂಗಲ ಸಿಂಗ್ ಬೆಂಕಿ ತಾತನವರು ಯನಗುಂಟಿ ನಂದಯ್ಯ ಸ್ವಾಮಿ ಹಿರೇಮಠ

ಶ್ರೀ ರಾಜ ಯೋಗಿ ಸಂತ ನಾಮದೇವಗೌಡ್ರು ಶರಣರು ಶ್ರೀ ಆಂಬಮಠ ಮದರಕಲ್ ಪಂಪಪಯ್ಯ ಸ್ವಾಮಿ ಹಿರೇಮಠ ಬಸ್ಸಯ್ಯ ಸ್ವಾಮಿ ಹಿರೇಮಠ ಅಧ್ಯಕ್ಷತೆ: ಶ್ರೀಮತಿ ಎಲ್ಲಮ್ಮ ಮಲ್ಲಪ್ಪ ಗಣಜಲಿ ಅಧ್ಯಕ್ಷರುಗ್ರಾಮ ಪಂಚಾಯತಿ ಚಿಂಚೋಡಿ

ವಿಶೇಷ ಸನ್ಮಾನಿತರು: ಸನ್ಮಾನ್ಯ ಶ್ರೀ ಡಾಕ್ಟರ್ ಅಯ್ಯಣ್ಣ ಬಲ್ಲಟಗಿ ಎಂ ಡಿ ಆರೋಗ್ಯ ಅಧಿಕಾರಿಗಳು ಪ್ರಾಸ್ತಾವಿಕ ನುಡಿ: ಶ್ರೀ ಮಹಾಂತಯ್ಯ ಸ್ವಾಮಿ ಅಧ್ಯಕ್ಷರು ಶ್ರೀ ಪರಮಾನಂದ ದೇವಸ್ಥಾನ ಜನ ಕಲ್ಯಾಣ ಟ್ರಸ್ಟ್ ಲಿಂಗದಹಳ್ಳಿ ಮುಖ್ಯ ಅತಿಥಿಗಳು ಶ್ರೀಮತಿ ವಿಜಯಲಕ್ಷ್ಮಿ ವೆಂಕೋಬ ನಾಯಕ ಅಧ್ಯಕ್ಷರು ಗ್ರಾಮ ಪಂಚಾಯತ್ ಜಾಲಹಳ್ಳಿ ಶ್ರೀ ವೀರಣ್ಣ ಸಾಹುಕಾರ್ ಪಾಣಿ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರು ಜಾಲಹಳ್ಳಿ ಶ್ರೀ ವೇಣುಗೋಪಾಲ್ ವಕೀಲರು ಕೆಪಿಸಿಸಿ ಕಾರ್ಯದರ್ಶಿ ಜಾಲಹಳ್ಳಿ ಶ್ರೀ ಚಂದಪ್ಪ ಬುದ್ದಿನ್ನಿ ಮಾಜಿ ತಾಲೂಕು ಅಧ್ಯಕ್ಷರು ಕುರುಬ ಸಮಾಜ ಸಿದ್ದಾಪುರ ಶ್ರೀ ಡಾ. ಹುಲಿಮನ ಗೌಡ ವೈದ್ಯಾಧಿಕಾರಿಗಳು ಸಮುದಾಯ ಆರೋಗ್ಯ ಕೇಂದ್ರ ಜಾಲಹಳ್ಳಿ ಶ್ರೀ ರಾಹುತಪ್ಪ ಹವಾಲ್ದಾರ್ ಪರಿಶಿಷ್ಟ ಪಂಗಡ ಕಲ್ಯಾಣ ಅಧಿಕಾರಿಗಳು ದೇವದುರ್ಗ ಶ್ರೀ ಗುಂಡುರಾವ್ ಸಿಪಿಐ ಗ್ರಾಮೀಣ ದೇವದುರ್ಗ ಶ್ರೀಮತಿ ವೈಶಾಲಿ ಜಳಕಿ ಪಿಎಸ್ಐ ಜಾಲಹಳ್ಳಿ ಸ್ವಾಗತ ಶ್ರೀ ವೆಂಕಟರಾಯ ಬೆನಕನ್ ಅಧ್ಯಕ್ಷರು ಹೊರನಾಡು ಅನ್ನಪೂರ್ಣೇಶ್ವರಿ ಸಂಘ ದೇವದುರ್ಗ ನಿರೂಪಣೆ ಶ್ರೀಮತಿ ಸುಲೋಚನಾ ಕಾರ್ಯನಿರ್ವದ ಅಧಿಕಾರಿಗಳು ಹೊರನಾಡು ಅನ್ನಪೂರ್ಣ ಸಂಘ ವಂದನಾರ್ಪಣೆ ಶ್ರೀ ರಾಜಶೇಖರ್ ಹಿರೇಮಠ ರಂಗಪ್ಪ ಬಂಡ್ಡಿ ಜಾಲಹಳ್ಳಿ ಹಾಗೂ ಲಿಂಗದಹಳ್ಳಿ ಗ್ರಾಮಸ್ಥರು ಸುತ್ತಮುತ್ತಲಿನ ಗ್ರಾಮದಿಂದ ಬಂದಿರ್ತಕ್ಕಂತ ಭಕ್ತರು ಊರಿನ ಗುರು ಹಿರಿಯರು ಸಮ್ಮುಖದಲ್ಲಿ ನೆರವೇರಿಸಲಾಯಿತು

ಪಂಚ ಗ್ಯಾರಂಟಿ ಯೋಜನೆಗಳಿಂದ ಜನರ ಬದುಕಿಗೆ ನೆಮ್ಮದಿ: ಕೆ. ಶ್ರೀನಿವಾಸರಾವ್



ಕಂಪ್ಲಿ:,ಮಾ.09-

ರಾಜ್ಯದಲ್ಲಿ ಬಡ ಹಾಗೂ ಮಧ್ಯಮ ವರ್ಗದ ಜನರ ಬದುಕು ಉತ್ತಮವಾಗಿರಲಿ ಎಂಬ ಉದ್ದೇಶದಿಂದ ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದು, ಇದರಿಂದ ಸಾಕಷ್ಟು ಜನರ ಜೀವನ ನೆಮ್ಮದಿಯಿಂದ ಕೂಡಿದೆ ಎಂದು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಕೆ. ಶ್ರೀನಿವಾಸರಾವ್ ಹೇಳಿದರು.

ತಾಲೂಕ ಪಂಚಾಯತಿ ಸಭಾಂಗಣದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಭಾನುವಾರ ಆಯೋಜಿಸಿದ್ದ ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಗಳ ಅರಿವು ಕಾರ್ಯಕ್ರಮವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಐದು ಗ್ಯಾರಂಟಿ ಯೋಜನೆಗಳು ಜನರಿಗೆ ವರದಾನವಾಗಿದ್ದು, ಈ ಯೋಜನೆಗಳು ಅರ್ಹ ಕುಟುಂಬಗಳಿಗೆ ತಲುಪುವಂತೆ ಮಾಡಬೇಕು ಎಂದು ಹೇಳಿದರು.

ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಆರ್.ಕೆ. ಶ್ರೀಕುಮಾರ ಪ್ರಾಸ್ತಾವಿಕವಾಗಿ ಮಾತನಾಡಿ, ಮಹಿಳೆಯರು ಕೂಡ ಪುರುಷರಷ್ಟೇ ಸಮಾನರು. ಮನೆಯ ಯಜಮಾನಿ ಕೆಯಿಂದ ಹಿಡಿದು ದೇಶದ ಹಣ ಕಾಸು ಸಚಿವೆಯ ಸ್ಥಾನವರೆಗೂ ಮಹಿಳೆಯರು ತಮ್ಮ ಸಾಮರ್ಥ್ಯವನ್ನು ತೋರಿಸಿದ್ದಾರೆ ಎಂದು ಹೇಳಿದರು.

ಇಂದಿನ ಆಧುನಿಕ ಸಮಾಜದಲ್ಲಿ ಮಹಿಳೆಯರು ಸಮಾಜದ ಮುಖ್ಯ ವಾಹಿನಿಗೆ ಬಂದು ಹಲವಾರು ಕ್ಷೇತ್ರಗಳಲ್ಲಿ ತಮ್ಮದೇ ಆದ ಪ್ರತಿಭೆ ತೋರಿಸುತ್ತಿದ್ದು, ಸ್ಪರ್ಧಾತ್ಮಕ ಯುಗದಲ್ಲಿಯೂ ಪ್ರಬಲ ಪೈಪೋಟಿ ನೀಡುತ್ತಿರುವುದು ಸಂತೋಷದಾಯಕ ಸಂಗತಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕ ಕೆ.ಎಸ್.ಮಲ್ಲನಗೌಡ ಹಾಗೂ ಶ್ರೀಶೈಲಗೌಡ, ಕಲ್ಯಾಣ ಕರ್ನಾಟಕ ರಸ್ತೆ ವಿಭಾಗದ ದೇವರೆಡ್ಡಿ, ಆಹಾರ ಮತ್ತು ನಾಗರಿಕ ಇಲಾಖೆಯ ವಿರುಪಾಕ್ಷಿಗೌಡ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೋಹನ್, ಲತಿಫಾಬೇಗಂ, ಪಿಡಿಒಗಳು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ನಿರ್ದೇಶಕರು, ಸ್ವಸಹಾಯ ಸಂಘದ ಅಧ್ಯಕ್ಷರು, ಅಂಗನವಾಡಿ ಕಾರ್ಯಕರ್ತೆಯರು, ಮತ್ತು ತಾಲೂಕು ಪಂಚಾಯಿತಿಯ ಎಲ್ಲಾ ಅಧಿಕಾರಿ ವೃಂದದವರು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.



ಶ್ರೀ ಶರಣಬಸವೇಶ್ವರರ ಮಹಾರಥೋತ್ಸವ : ಸಹಸ್ರಾರು ಮಂದಿ ಭಾಗಿ

ಕಲಬುರಗಿ,ಮಾ.09-

ಕಲ್ಯಾಣ ಕರ್ನಾಟಕದ ಪ್ರಸಿದ್ಧ ಧಾರ್ಮಿಕ ಸ್ಥಳವಾದ ಶ್ರೀ ಶರಣ ಬಸವೇಶ್ವರರ 204ನೆಯ ಜಾತ್ರೋತ್ಸವ ನಿಮಿತ್ತ ರವಿವಾರ ಸಂಜೆ ಸಹಸ್ರಾರು ಭಕ್ತರ ಮಧ್ಯೆ ಮಹಾದಾಸೋಹಿ ಶರಣ ಶ್ರೀ ಶರಣ ಬಸವೇಶ್ವರರ ಮಹಾರಥೋತ್ಸವವು ಜರುಗಿತು.

ಶರಣಬಸವೇಶ್ವರ ಸಂಸ್ಥಾನದ 9ನೆಯ ಪೀಠಾಧಿಪತಿ ಚಿ.ದೊಡ್ಡಪ್ಪ ಅಪ್ಪ ಅವರು ಪ್ರಸಾದ ಬಟ್ಟಲು (ಬೆಳ್ಳಿ ತಟ್ಟೆ) ಹಾಗೂ ಲಿಂಗ ಸಜ್ಜಿಕೆ (ಪವಿತ್ರ ಲಿಂಗವನ್ನು ಇಟ್ಟುಕೊಳ್ಳಲು ಸಂತರು ಬಳಸುತ್ತಿದ್ದ ಶ್ರೀಗಂಧದ ಪೆಟ್ಟಿಗೆ)ತೋರಿಸುವ ಮೂಲಕ ರಥೋತ್ಸವಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಸಂಸ್ಥಾನದ ಅಧ್ಯಕ್ಷೆ ಮಾತೋಶ್ರೀ ಡಾ.ದಾಕ್ಷಾಯಣಿ ಅವ್ವಾಜಿ, ಕಾರ್ಯದರ್ಶಿ ಬಸವರಾಜ ದೇಶಮುಖ, ಭವಾನಿ ಎಸ್. ಅಪ್ಪ, ಶಿವಾನಿ ಎಸ್.ಅಪ್ಪ, ಮಹೇಶ್ವರಿ ಎಸ್.ಅಪ್ಪ, ಡಾ.ಅಲ್ಲಮ ಪ್ರಭು ದೇಶಮುಖ ಸೇರಿದಂತೆ ಸಂಸ್ಥಾನದ ಪ್ರಮುಖರು ಇದ್ದರು.

ಸಹಸ್ರಾರು ಭಕ್ತರು ಇದೇ ವೇಳೆಯಲ್ಲಿ ಜೈಘೋಷಣೆ ಹಾಕಿದರು. ರಥೋತ್ಸವ ಪ್ರಾರಂಭವಾಗುವ ಮೊದಲು ದೇವಾಲಯದಲ್ಲಿ ಅಲಂ ಕರಿಸಲಾದ ರಥದಲ್ಲಿ ಸಾಂಪ್ರದಾ ಯಿಕ ವಿಧಿ ವಿಧಾನಗಳು ಮತ್ತು ವಿಶೇಷ ಪೂಜೆಗಳನ್ನು ನೆರವೇರಿಸ ಲಾಯಿತು. ಇದೇ ವೇಳೆಯಲ್ಲಿ ದೇವಸ್ಥಾನದ ಆವರಣದಲ್ಲಿ ನಂದಿ ಕೋಲು, ಪಲ್ಲಕ್ಕಿ ಉತ್ಸವ ನಡೆಯಿತು.

ಶ್ರೀ ಶರಣಬಸವೇಶ್ವರರ ಮಹಾರಥೋತ್ಸವಕ್ಕೆ ಯಾದಗಿರಿ, ರಾಯಚೂರು, ಕಲಬುರಗಿ, ಬೀದರ್, ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆ, ತಾಲೂಕುಗಳಿಂದ ಸಾವಿರಾರು ಭಕ್ತರು ಆಗಮಿಸಿದ್ದರು. ಕೆಲವು ಭಕ್ತರು ಕಾಲ್ನಡಿಗೆಯ ಮೂಲಕ ದೇವಸ್ಥಾನಕ್ಕೆ ತಲುಪಿದರೆ ಇನ್ನುಳಿದವರು ಕಾರು, ಕ್ರೂಷರ್, ಜೀಪ್, ಮಿನಿ ಬಸ್, ಮತ್ತಿತ್ತರ ವಾಹನಗಳ ಮೂಲಕ ಆಗಮಿಸಿದ್ದರು. ವಿವಿಧ ವಾದ್ಯಗಳೊಂದಿಗೆ ನೆರವೇರಿದ ರಥೋತ್ಸವದಲ್ಲಿ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ನಗರ ಪೊಲೀಸರು ಬಿಗಿ ಬಂದೋಬಸ್ತ್ ಒದಗಿಸಿದರು.

ಸಾರ್ವಜನಿಕ ರಸ್ತೆಯನ್ನು ಅನಧಿಕೃತವಾಗಿ ಅಗೆದು ಹಾನಿ ಮಾಡಿರುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯ





ಲಿಂಗಸಗೂರು : ಮಾ 8 .

ತಾಲೂಕಿನ ಪುರಸಭೆ ವ್ಯಾಪ್ತಿಯಲ್ಲಿ ಬರುವ ಬಸ್ ನಿಲ್ದಾಣದ ಕಾಂಪ್ಲೆಕ್ಸ್ ಎದುರುಗಡೆ ಇರುವ ಜೀಶನ್ ಅಪನಾ ಹೈದರಾಬಾದ್ ರೆಸ್ಟೋರೆಂಟ್ ಕಟ್ಟಡದ ಮಾಲೀಕರು ಯಾವುದೇ ಪೂರ್ವಾನುಮತಿ ಪಡೆಯದೆ ಸಾರ್ವಜನಿಕ ರಸ್ತೆಯನ್ನು ಅಗೆದಿದ್ದಾರೆ.

ಸಾರ್ವಜನಿಕ ರಸ್ತೆಯನ್ನು ಅನಧಿಕೃತವಾಗಿ ಅಗೆದು ಹಾನಿ ಮಾಡಿರುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಪುರಸಭೆ ಮುಖ್ಯಾಧಿಕಾರಿಗಳಿಗೆ

ದ ಸಂ ಸ ತಾಲೂಕ ಅಧ್ಯಕ್ಷ ಮೋಹನ್ ಗೋಸ್ಲೆ ಮನವಿಯನ್ನು ಸಲ್ಲಿಸಿದರು.

ಈ ರಸ್ತೆಯು ಇತ್ತೀಚೆಗಷ್ಟೇ ಹೊಸದಾಗಿ ನಿರ್ಮಾಣಗೊಂಡಿದ್ದು, ಮಾಲೀಕರು ತಮ್ಮ ವೈಯಕ್ತಿಕ ಹಿತಾಸಕ್ತಿಗಾಗಿ ರಸ್ತೆಯನ್ನು ಕಿತ್ತು ಹಾಕಿರುವುದರಿಂದ ಸಾರ್ವಜನಿಕ ಆಸ್ತಿಗೆ ನಷ್ಟ ಉಂಟಾಗಿದೆ. ಇದರಿಂದಾಗಿ ಈ ಭಾಗದಲ್ಲಿ ಸಂಚರಿಸುವ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತೀವ್ರ ತೊಂದರೆಯಾಗುತ್ತಿದ್ದು, ಅಪಘಾತಗಳು ಸಂಭವಿಸುವ ಭೀತಿಯಿದೆ.

ಸಂಬಂಧಪಟ್ಟ ರೆಸ್ಟೋರೆಂಟ್ ಮಾಲೀಕರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕು.

ಸಾರ್ವಜನಿಕ ಆಸ್ತಿಗೆ ಹಾನಿ ಮಾಡಿರುವುದಕ್ಕೆ ಅವರಿಗೆ ದಂಡ ವಿಧಿಸಬೇಕು.

ಕೂಡಲೇ ರಸ್ತೆಯನ್ನು ಸರಿಪಡಿಸಿ ಸಾರ್ವಜನಿಕರ ಸಂಚಾರಕ್ಕೆ ಅನುವು ಮಾಡಿಕೊಡಬೇಕು. ಹಾಗೂ ಕೂಡಲೇ ತಾವು ಸ್ಥಳ ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಹೇಳಿದರು . ಈ ಸಂದರ್ಭದಲ್ಲಿ

ರಾಜು ತಂಬಾಕೆ ಸಮಾಜ ಸೇವಕರು ಹಾಗೂ ವಾರ್ಡ್ ನಂ, 17 ಸ್ಥಳೀಯ ನಿವಾಸಿ ಇದ್ದರು .

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ



ರಾಜಾಬಾಗ್ ಸವಾರ್ ದರ್ಗಾದ ಉರುಸ್ ಸಂಭ್ರಮದಿಂದ ಆಚರಣೆ


ಕೊಪ್ಪಳ,ಮಾ.09-

ನಗರದ ಮಧ್ಯಭಾಗ ಪ್ರಮುಖ ಜವಾಹರ್ ರಸ್ತೆ ಬಳಿ ಇರುವ ಪುರಾತನ ಕಾಲದ ಐತಿಹಾಸಿಕ ಧಾರ್ಮಿಕ ಸುಕ್ಷೇತ್ರ ಹಿಂದೂ ಮುಸ್ಲಿಮರ ಭವ್ಯಕ್ಯತೆಯ ಪ್ರತೀಕ ಹಜರತ್ ರಾಜಾ ಬಾಗ್ ಸವಾರ್ ದರ್ಗಾದ ಉರುಸ್ ಆಚರಣೆ ಪ್ರತಿ ವರ್ಷದಂತೆ ಈ ವರ್ಷವೂ ಸಹ ಸಡಗರ ಸಂಭ್ರಮದಿಂದ ಆಚರಿಸಲಾಯಿತು

,

ಶನಿವಾರ ಗಂಧ ದೊಂದಿಗೆ ಆರಂಭ ಗೊಂಡ ಉರುಸ್ ಆಚರಣೆ ರವಿವಾರ ಬೆಳಿಗ್ಗೆಯಿಂದ ರಾತ್ರಿ ವರೆಗೆ ಉರುಸ್ ಆಚರಣೆ ಧಾರ್ಮಿಕ ಮತ್ತು ಸಾರ್ವಜನಿಕ ಕಾರ್ಯಕ್ರಮಗಳು ಸಡಗರ ಸಂಭ್ರಮದಿಂದ ಯಶಸ್ವಿಯಾಗಿ ಜರುಗಿತು, ದರ್ಗಾ ಆಡಳಿತ ಮಂಡಳಿ ಅಧ್ಯಕ್ಷರಾದ ಮೌಲಾ ಹುಸೇನ್ ಜಮೇದಾರ್ ನೇತೃತ್ವದಲ್ಲಿ ಕಾರ್ಯದರ್ಶಿ ಹಾಗೂ ನ್ಯಾಯವಾದಿ ಅಬ್ದುಲ್ ಗನಿ ಅಲಿಯಾಸ್ ಅಫ್ಸರ್ ಸಾಬ್ ರವರ ಉಪಸ್ಥಿತಿಯಲ್ಲಿ ಮುಸ್ಲಿಂ ಸಮಾಜದ ಧಾರ್ಮಿಕ ಗುರುಗಳು ಸಮಾಜದ ಎಲ್ಲಾ ಮುಖಂಡರು ಸಮಾಜದ ಜನಪ್ರತಿನಿಧಿಗಳು ಉರೂಸ್ ಆಚರಣೆ ಕಾರ್ಯಕ್ರಮದ ಸಂದರ್ಭದಲ್ಲಿ ಪಾಲ್ಗೊಂಡು ವಿಶೇಷ ಸಾಮೂಹಿಕ ಪ್ರಾರ್ಥನೆ ನಡೆಸಿದರು , ದರ್ಗಾದ ಮುಜಾವರ್ ವರ್ಧಾನ್ ಅಲಿ ಮುಜಾವರ್ ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಭಕ್ತ ಸಮೂಹದ ಹಿಂದೂ ಮುಸ್ಲಿಂ ಸಾರ್ವಜನಿಕರು ಉರೂಸ್ ಆಚರಣೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಪೂರ್ಣಗೊಳಿಸಿದರು,

ಕರ್ನಾಟಕ ರಾಜ್ಯ ವಕೀಲರ ಪರಿಷತ್ತು ಚುನಾವಣೆ : ಆಸಿಫ್ ಅಲಿ ಗೆ ಬೆಂಬಲಿಸಲು ಹಲವರ ಮನವಿ



ಕೊಪ್ಪಳ,ಮಾ.09-

ಕರ್ನಾಟಕ ರಾಜ್ಯ ವಕೀಲರ ಪರಿಷತ್ತು ಚುನಾವಣೆ 2026 ರಾಜ್ಯ ಸಮಿತಿಯ ಸದಸ್ಯ ಸ್ಥಾನಕ್ಕೆ ಸ್ಪರ್ಧಿಸಿದ ಕೊಪ್ಪಳದ ಹಿರಿಯ ನ್ಯಾಯವಾದಿ ಎಸ್ ಆಸೀಫ್ ಅಲಿ ರವರು ರಾಜ್ಯಾದ್ಯಂತ ವ್ಯಾಪಕ ಪ್ರಚಾರ ನಡೆಸಿದ್ದು ಅವರಿಗೆ ಮತದಾರ ನ್ಯಾಯವಾದಿಗಳಿಂದ ವ್ಯಾಪಕ ಬೆಂಬಲ ವ್ಯಕ್ತ ವಾಗುತ್ತಿದೆ ಎಂದು ಹೇಳಲಾಗಿದೆ, ಅವರು ರಾಜ್ಯದ್ಯಂತ ಮತಯಾಚನೆ ಮಾಡಿ ಸ್ಪರ್ಧಿಸಿರುವ ತಮಗೆ ಬೆಂಬಲಿಸುವಂತೆ ಮತದಾರರ ನ್ಯಾಯವಾದಿ ಗಳಲ್ಲಿ ಅವರು ಮನವಿ ಮಾಡಿಕೊಂಡಿದ್ದಾರೆ,

ರಾಜ್ಯದ ವಿವಿಧ ಜಿಲ್ಲಾ ತಾಲೂಕ ಕೇಂದ್ರಗಳಿಗೆ ಭೇಟಿ ನೀಡಿದ ಅವರು ಆಲ್ಲಿನ ಜಿಲ್ಲಾ ಮತ್ತು ತಾಲೂಕ ವಕೀಲರ ಸಭಾಭವನದಲ್ಲಿ ಪ್ರಚಾರ ಸಭೆ ನಡೆಸಿ ಮನವಿ ಮಾಡಿಕೊಂಡರು, ಇದೆ ಮಾರ್ಚ್ 11 ರಂದು ನಡೆಯಲಿರುವ ಚುನಾವಣೆಯಲ್ಲಿ ಕೊಪ್ಪಳದ ಹಿರಿಯ ನ್ಯಾಯವಾದಿ ಎಸ್ ಆಸಿಫ್ ಅಲಿ ಅವರಿಗೆ ಮೊದಲನೆಯ ಪ್ರಾಶಸ್ತ್ಯದ ಮತವನ್ನು ನೀಡುವುದರ ಜೊತೆಗೆ ಹೆಚ್ಚಿನ ಮತಗಳನ್ನು ನೀಡಿ ಬೆಂಬಲಿಸಬೇಕು ಎಂದು ಹಲವರು ವ್ಯಾಪಕ ಪ್ರಚಾರ ನಡೆಸಿ ಮನವಿ ಮಾಡಿಕೊಂಡಿದ್ದಾರೆ, ವಕೀಲರ ಪರಿಷತ್ತಿನ ಸರ್ವತೋಮುಖ ಅಭಿವೃದ್ಧಿಗಾಗಿ ಮತ್ತು ನ್ಯಾಯಾದಿಗಳ ಸಂಘಟನೆ ಬಲಿಷ್ಠಗೊಳಿಸುವುದರ ಜೊತೆಗೆ ಕಕ್ಷಿದಾರ ಸಾರ್ವಜನಿಕರಿಗೆ ಇನ್ನೂ ಉತ್ತಮ ರೀತಿಯಲ್ಲಿ ನ್ಯಾಯ ಒದಗಿಸಿ ಕೊಡುವ ಕೆಲಸ ಎಲ್ಲರೂ ಸೇರಿ ಮಾಡಲು ಮತ್ತು ನಮ್ಮ ಸಂಘಟನೆ ಬೆಳೆಸಲು ಮತ್ತೊಮ್ಮೆ ಅವರಿಗೆ ಅವಕಾಶ ನೀಡಬೇಕು, ನ್ಯಾಯವಾದಿಗಳ ನ್ಯಾಯ ಸಮ್ಮತವಾದಂತ ಎಲ್ಲಾ ಬೇಕು ಬೇಡಿಕೆಗಳ ಈಡೇರಿಕೆಗಾಗಿ ಪ್ರಮಾಣಿಕವಾಗಿ ಶ್ರಮಿಸಲು ಅವರಿಗೆ ಅವಕಾಶ ನೀಡಬೇಕು ಈ ಹಿಂದೆಯೂ ಸಹ ಅವರು ಸಂಘದ ಸರ್ವತೋಮುಖ ಅಭಿವೃದ್ಧಿಗಾಗಿ ಹೆಚ್ಚಿನ ಒತ್ತುಕೊಟ್ಟು ಶ್ರಮಿಸಿದ್ದಾರೆ ಒಳ್ಳೆಯ ಅನುಭವ ಹೊಂದಿರುವ ಆಸಿಫ್ ಅಲಿಯವರೆಗೆ ಮತ್ತೊಮ್ಮೆ ಆಯ್ಕೆ ಮಾಡಿಕೊಳ್ಳುವುದು ಅವಶ್ಯಕತೆವಾಗಿದೆ ಎಂದು ಹಲವು ಜನ ವಕೀಲರು ಹಾಗೂ ವಿವಿಧ ಸಂಘಟನೆಗಳು ಆಸಿಫ್ ಅಲಿಯವರ ಪರ ವ್ಯಾಪಕ ಪ್ರಚಾರ ಮಾಡಿ ಅವರಿಗೆ ಬೆಂಬಲಿಸುವಂತೆ ಮನವಿ ಮಾಡಿಕೊಂಡಿದ್ದಾರೆ,

ನಿಮ್ಮೂರು ಸುದ್ದಿ

ಸಂಪಾದಕೀಯ

ಭರವಸೆ, ಸವಾಲುಗಳ ಮಿಶ್ರಣ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿರುವ 2026-27ನೇ ಸಾಲಿನ ಆಯವ್ಯಯ ರಾಜ್ಯದ ಆರ್ಥಿಕತೆಯನ್ನು ಮುನ್ನಡೆಸುವ ಆಶಯ ಮತ್ತು ಪ್ರಾಯೋಗಿಕ ಸವಾಲುಗಳ ನಡುವಿನ ಹಗ್ಗದ ಮೇಲಿನ ನಡಿಗೆಯಂತೆ ಭಾಸವಾಗುತ್ತಿದೆ. ಅತಿ ಹೆಚ್ಚು ಸಲ ಬಜೆಟ್ ಮಂಡಿಸಿದ ಅನುಭವವಿರುವ ಸಿದ್ದರಾಮಯ್ಯ ಅವರು, ಈ ಬಾರಿಯೂ ತಮ್ಮ ಹಳೆಯ ಅಹಿಂದ ಮತ್ತು ಸಾಮಾಜಿಕ ನ್ಯಾಯದ ಸಿದ್ಧಾಂತಕ್ಕೆ ಚ್ಯುತಿ ಬರದಂತೆ ಸಮತೋಲನ ಕಾಯ್ದುಕೊಳ್ಳಲು ಪ್ರಯತ್ನಿಸಿದ್ದಾರೆ. ಆದರೆ, ಅತಿಯಾದ ಸಾಲದ ಹೊರೆ ಮತ್ತು ಗ್ಯಾರಂಟಿ ಯೋಜನೆಗಳ ನಿರ್ವಹಣೆಯ ಸವಾಲಿನ ನಡುವೆ ಅಭಿವೃದ್ಧಿ ಕಾಮಗಾರಿಗಳಿಗೆ ವೇಗ ನೀಡಲು ಪ್ರಯತ್ನಿಸಿದ್ದಾರೆ.

ಬಜೆಟ್‌ನ ಸಿಂಹಪಾಲು ಐದು ಪ್ರಮುಖ ಗ್ಯಾರಂಟಿ ಯೋಜನೆಗಳಿಗೇ ಮೀಸಲಾಗಿರುವುದು ನಿರೀಕ್ಷಿತವೇ ಆಗಿತ್ತು. ಈ ಯೋಜನೆಗಳು ಕೆಳವರ್ಗದ ಜನರ ಕೈಗೆ ನೇರವಾಗಿ ಹಣ ತಲುಪಿಸುವ ಮೂಲಕ ಗ್ರಾಮೀಣ ಆರ್ಥಿಕತೆಗೆ ಚೈತನ್ಯ ನೀಡಿರುವುದನ್ನು ನಿರಾಕರಿಸುವಂತಿಲ್ಲ. ಆದರೆ, ಕೇವಲ ಕಲ್ಯಾಣ ಕಾರ್ಯಕ್ರಮಗಳಿಗೇ ಸಾವಿರಾರು ಕೋಟಿ ರೂ.ಗಳನ್ನು ವ್ಯಯಿಸುವುದರಿಂದ ರಾಜ್ಯದ ಬಂಡವಾಳ ವೆಚ್ಚದ (ಕ್ಯಾಪಿಟಲ್ ಎಕ್ಸ್ ಪೆಂಡಿಚರ್) ಮೇಲೆ ಪರಿಣಾಮ ಆಗಬಹುದು. ಮೂಲಸೌಕರ್ಯ, ನೀರಾವರಿ ಮತ್ತು ಕೈಗಾರಿಕಾ ವಲಯಕ್ಕೆ ಹೆಚ್ಚಿನ ಅನುದಾನ ಸಿಗದೆ ಹೋದರೆ, ರಾಜ್ಯದ ದೀರ್ಘಕಾಲೀನ ಬೆಳವಣಿಗೆ ಕುಂಠಿತವಾಗುವ ಸಾಧ್ಯತೆಯಿದೆ. ಕೃಷಿ ವಲಯಕ್ಕೆ ಈ ಬಾರಿ ಹೊಸ ಆಯಾಮ ನೀಡಲು ಪ್ರಯತ್ನಿಸಲಾಗಿದೆ. ಹವಾಮಾನ ಬದಲಾವಣೆ ಹಿನ್ನೆಲೆಯಲ್ಲಿ ರೈತರಿಗೆ ಬೆಂಬಲ ನೀಡುವ ಯೋಜನೆಗಳು ಸ್ವಾಗತಾರ್ಹ. ಮುಖ್ಯವಾಗಿ ನೀರಾವರಿ ಯೋಜನೆಗಳ ಪೂರ್ಣಗೊಳಿಸುವಿಕೆಗೆ ನೀಡಿರುವ ಆದ್ಯತೆ ರೈತರಲ್ಲಿ ಆಶಾಭಾವನೆ ಮೂಡಿಸಿದೆ. ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಮೂಲಸೌಕರ್ಯ ಸುಧಾರಣೆಗೆ ನೀಡಿರುವ ಅನುದಾನ ಜನಸಾಮಾನ್ಯರ ಜೀವನಮಟ್ಟವನ್ನು ಸುಧಾರಿಸಲು ಪೂರಕವಾಗಿದೆ.

ರಾಜಧಾನಿ ಬೆಂಗಳೂರಿನ ಸಂಚಾರ ದಟ್ಟಣೆ ಮತ್ತು ಮಳೆನೀರಿನ ಕಾಲುವೆಗಳ ಸುಧಾರಣೆಗೆ ವಿಶೇಷ ಪ್ಯಾಕೇಜ್ ಘೋಷಿಸಿರುವುದು ಬೆಂಗಳೂರಿಗರಿಗೆ ತುಸು ಸಮಾಧಾನ ತರುವ ಸಂಗತಿ. ಜಾಗತಿಕ ಮಟ್ಟದ ನಗರಗಳಿಗೆ ಪೈಪೋಟಿ ನೀಡುವ ನಿಟ್ಟಿನಲ್ಲಿ ಬೆಂಗಳೂರನ್ನು ಅಭಿವೃದ್ಧಿಪಡಿಸುವ ತುಡಿತ ಬಜೆಟ್‌ನಲ್ಲಿ ಕಾಣುತ್ತಿದೆ. ಆದರೆ, ಈ ಯೋಜನೆಗಳು ಕೇವಲ ಘೋಷಣೆಯಾಗಿ ಉಳಿಯದೆ, ಕಾಲಮಿತಿಯಲ್ಲಿ ಅನುಷ್ಠಾನಗೊಳ್ಳಬೇಕಾಗಿದೆ.

ರಾಜ್ಯದ ಒಟ್ಟು ಸಾಲದ ಪ್ರಮಾಣ ಹೆಚ್ಚುತ್ತಿರುವುದು ಆತಂಕದ ಸಂಗತಿ. ಸಂಪನ್ಮೂಲ ಕ್ರೋಢೀಕರಣಕ್ಕಾಗಿ ಅಬಕಾರಿ ತೆರಿಗೆಯಂತಹ ಮೂಲಗಳ ಮೇಲೆ ಅತಿಯಾಗಿ ಅವಲಂಬಿತವಾಗಿರುವುದು ಜನರ ಮೇಲೆ ಪರೋಕ್ಷ ಹೊರೆಯಾಗಿ ಪರಿಣಮಿಸಬಹುದು. ಕೇಂದ್ರದಿಂದ ಬರುವ ತೆರಿಗೆ ಪಾಲಿನ ಬಗ್ಗೆ ಇರುವ ಅಸಮಾಧಾನವನ್ನೂ ಮುಖ್ಯಮಂತ್ರಿಗಳು ಬಜೆಟ್ ಭಾಷಣದಲ್ಲಿ ಪ್ರಸ್ತಾಪಿಸಿದ್ದು, ಇದು ರಾಜ್ಯ-ಕೇಂದ್ರದ ನಡುವಿನ ಆರ್ಥಿಕ ಸಂಘರ್ಷದ ಸೂಚನೆಯೂ ಹೌದು.

ಒಟ್ಟಾರೆ, ಇದು ಜನಪ್ರಿಯತೆ ಮತ್ತು ವಾಸ್ತವದ ನಡುವಿನ ಬಜೆಟ್ ಆಗಿದೆ. ಬಡವರ ಹೊಟ್ಟೆ ತುಂಬಿಸುವ ಇಚ್ಛಾಶಕ್ತಿಯ ಜತೆಗೆ, ರಾಜ್ಯದ ಬೊಕ್ಕಸವನ್ನು ಸುಸ್ಥಿತಿಯಲ್ಲಿಡುವ ದೂರದೃಷ್ಟಿಯೂ ಪ್ರಯತ್ನವೂ ಇದರಲ್ಲಿ ಕಾಣುತ್ತಿದೆ. ಘೋಷಿತ ಯೋಜನೆಗಳು ಕಾಗದದ ಮೇಲಿನ ಅಂಕಿ-ಅಂಶಗಳಾಗಿ

ಉಳಿಯದೆ ಸಾಮಾನ್ಯ ಜನರ ಬದುಕಿನಲ್ಲಿ ಬದಲಾವಣೆ ತಂದಾಗ ಮಾತ್ರ ಈ ಬಜೆಟ್‌ಗೆ ನೈಜ ಸಾರ್ಥಕತೆ ದೊರೆಯಲಿದೆ.

ಮೈಸೂರು ಸಿಲ್ಕ್ ಸೀರೆಯ ಆನ್‌ಲೈನ್ ಮಾರಾಟ ನಿಲ್ಲಿಸಿ, ಸ್ಥಳೀಯ ಮಾರಾಟಕ್ಕೆ ಚಿಂತನೆ: ಸಚಿವ ಕೆ.ವೆಂಕಟೇಶ್

ಬೆಂಗಳೂರು: ಬೇಡಿಕೆಯ ಹಿನ್ನೆಲೆಯಲ್ಲಿ ಗುಣಮಟ್ಟದ ಮೈಸೂರು ರೇಷ್ಮೆ ಸೀರೆಗಳ ಉತ್ಪಾದನೆ ಹೆಚ್ಚಿಸಲು ಪ್ರಯತ್ನಿಸಲಾಗುತ್ತಿದೆ. ರೇಷ್ಮೆ ಸೀರೆಗಳ ಆನ್‌ಲೈನ್‌ನಲ್ಲಿ ಮಾರಾಟವನ್ನು ನಿಲ್ಲಿಸಿ ಸ್ಥಳೀಯವಾಗಿ ಮಾರಾಟ ಮಾಡುವ ಚಿಂತನೆ ಇದೆ ಎಂದು ಸಚಿವ ಕೆ.ವೆಂಕಟೇಶ್ ತಿಳಿಸಿದರು.

ವಿಧಾನಸಭೆಯಲ್ಲಿ ಇಂದು ಮೈಸೂರು ರೇಷ್ಮೆ ಸೀರೆಗಳ ಕುರಿತು ಚರ್ಚೆಯಾಯಿತು. ಪ್ರಶ್ನೋತ್ತರ ಅವಧಿಯಲ್ಲಿ ರೇಷ್ಮೆ ಸೀರೆಗಳ ಮಾರಾಟ, ಉತ್ಪಾದನೆ ಮತ್ತು ಮಾರಾಟ ಪ್ರಕ್ರಿಯೆ ಸರಳಗೊಳಿಸುವ ಸಂಬಂಧ ಶಾಸಕ ಶ್ರೀವತ್ಸ ಟಿ.ಎಸ್. ಅವರು ವಿಷಯ ಪ್ರಸ್ತಾಪಿಸಿದರು. ಇದಕ್ಕೆ ಉತ್ತರಿಸಿದ ಸಚಿವ ಕೆ.ವೆಂಕಟೇಶ್, ಮೈಸೂರು ರೇಷ್ಮೆ ಸೀರೆಗಳಿಗೆ ಡಿಮ್ಯಾಂಡ್ ಇದೆ. ದಿನಕ್ಕೆ 300 - 400 ಸೀರೆಗಳು ಉತ್ಪಾದನೆ ಆಗುತ್ತಿದೆ. ಎಚ್ಚರಿಕೆಯಿಂದ ಗುಣಮಟ್ಟದ ಸೀರೆಗಳನ್ನು ತಯಾರು ಮಾಡಲಾಗುತ್ತದೆ. ಸೀರೆಗಳ ಉತ್ಪಾದನೆ ಹೆಚ್ಚಿಸಲು ಪ್ರಯತ್ನ ಮಾಡಲಾಗುತ್ತಿದೆ. ಜನ ಸೀರೆ ಖರೀದಿಗೆ ಬೆಳಗ್ಗೆ 3 ಗಂಟೆಯಿಂದ ಕ್ಯೂ ನಿಲ್ತಾರೆ ಅಂತ ಶ್ರೀವತ್ಸ ಹೇಳ್ತಾರೆ. ಸೆಕೆಂಡ್ಸ್ ಸೇಲ್ ಅಂತ ಮಾರಾಟ ಮಾಡ್ತಾರೆ, ಡಿಸ್ಕೌಂಟ್ ಇರುತ್ತೆ. ಆಗ ಜನ ಕ್ಯೂನಲ್ಲಿ ನಿಲ್ತಾರೆ ಎಂದು ಹೇಳಿದರು.

ಸೀರೆ ಡ್ಯಾಮೇಜ್ ಇದ್ದರೆ ಮಹಿಳೆಯರು ಖರೀದಿ ಮಾಡಲ್ಲ. ಹಾಗಾಗಿ ಮಗ್ಗದ ಮೂಲಕ ನಿಧಾನವಾಗಿ ಕ್ವಾಲಿಟಿ ಸೀರೆ ನೇಯ್ಗೆ ಮಾಡಲಾಗ್ತಿದೆ. ಕ್ವಾಲಿಟಿ ಇರೋದ್ರಿಂದ ಬೇಡಿಕೆ ಜಾಸ್ತಿ ಇದೆ. ಬೇರೆ ರಾಜ್ಯಗಳಿಂದಲೂ ಬೇಡಿಕೆ ಇದೆ. ಹೊರ ರಾಜ್ಯ, ವಿದೇಶಗಳಿಂದಲೂ ಬೇಡಿಕೆ ಇದ್ದು, ಆನ್‌ಲೈನ್ ಮೂಲಕ ಸೇವೆ ನಿಲ್ಲಿಸುತ್ತೇವೆ. ಸ್ಥಳೀಯವಾಗಿರುವ ಬೇಡಿಕೆಯನ್ನು ಮೊದಲು ನಿವಾರಿಸುತ್ತೇವೆ ಎಂದರು.

ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ()ದಲ್ಲಿ ಕಳೆದ ಮೂರು ವರ್ಷಗಳಿಂದ ಒಟ್ಟು 3,10,667 ಸೀರೆಗಳು ತಯಾರಾಗಿದೆ. ಈ ಪೈಕಿ ಮಾರಾಟವಾಗಿರುವ ಸೀರೆಗಳು 3,09,659. ನಿಗಮ 2022-23ರಲ್ಲಿ 46.75 ಕೋಟಿ, 2023-24 ಸಾಲಿನಲ್ಲಿ 73.40 ಕೋಟಿ ರೂ. ಹಾಗೂ 2024-25ರಲ್ಲಿ 101.15 ಕೋಟಿ ರೂ. ಲಾಭ ಗಳಿಸಿದೆ ಎಂದು ಮಾಹಿತಿ ನೀಡಿದರು.

ರೇಷ್ಮೆ ನೂಲು ತಯಾರಿಕಾ ಘಟಕ ಮುಚ್ಚಬೇಡಿ: ಇದೇ ವೇಳೆ ಟಿ.ನರಸೀಪುರ ರೇಷ್ಮೆ ನೂಲು ತಯಾರಿಕಾ ಘಟಕ ಮುಚ್ಚುವ ವಿಚಾರವನ್ನು ಪ್ರಸ್ತಾಪಿಸಿ, ಟಿ.ನರಸೀಪುರ ರೇಷ್ಮೆ ನೂಲು ತಯಾರಿಕಾ ಘಟಕ ಮುಚ್ಚಲು ಹೊರಟ ಸರ್ಕಾರದ ನಡೆ ಸರಿಯಲ್ಲ. ಟಿ.ನರಸೀಪುರದಲ್ಲಿ ರೇಷ್ಮೆ ನೂಲು ತೆಗೆಯುವ ಘಟಕ ಮುಚ್ಚಲು ಸರ್ಕಾರ ಹೊರಟಿದೆ. ಇದು ಸರಿಯಲ್ಲ. ಸರ್ಕಾರ ಇಲ್ಲಿ ಸ್ಟೇಡಿಯಂ ಮಾಡಲು ಯೋಜಿಸಿದೆ. ಸರ್ಕಾರ ತನ್ನ ತೀರ್ಮಾನ ಕೈಬಿಡಬೇಕು ಎಂದು ಅಶೋಕ್ ಆಗ್ರಹಿಸಿದರು. ಇದಕ್ಕೆ ಸಚಿವ ಬೈರತಿ ಸುರೇಶ್ ದನಿಗೂಡಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ, ಸಚಿವ ಕೆ.ವೆಂಕಟೇಶ್ ಅಲ್ಲಿ ಸ್ಟೇಡಿಯಂಗೆ ಜಾಗ ಇದೆ ಅಂತ ಯಾರೋ ಸಿಎಂಗೆ ಮಿಸ್ ಗೈಡ್ ಮಾಡಿದ್ರು. ಬಳಿಕ ಅವರಿಗೆ ಅದು ಗೊತ್ತಾಗಿದೆ. ಆ ಜಾಗ ಕೊಡುವ ಚಿಂತನೆಯನ್ನು ಕೈ ಬಿಡಲು ಸರ್ಕಾರ ತೀರ್ಮಾನ ಮಾಡಿದೆ. ಆ ಜಾಗ ಈಗ ಮಾರಾಟಕ್ಕಿಲ್ಲ. ಟಿ.ನರಸೀಪುರದ ಕೆಎಸ್‌ಐಸಿ ಘಟಕ ಮುಂದುವರೆಯಲಿದೆ, ಮುಚ್ಚೋದಿಲ್ಲ. ಅಲ್ಲಿ ಸ್ಟೇಡಿಯಂ ಕಟ್ಟಲ್ಲ ಎಂದು ಸ್ಪಷ್ಟಪಡಿಸಿದರು.

ಇದೇ ವೇಳೆ ಆರ್.ಅಶೋಕ್, ನಲ್ಲಿ ಕೆಲಸ ಮಾಡೋರಿಗೆ ವೇತನ ಸರಿಯಾಗಿಲ್ಲ. ಉತ್ತಮ ಲಾಭ ಮಾಡ್ತಿದೆ, ಅದರಲ್ಲಿ ಶೇ.1ರಷ್ಟು ಲಾಭವನ್ನು ಕೆಲಸ ಮಾಡೋರಿಗೆ ಕೊಡಿ. 99 ಕೋಟಿ ರೂ ಲಾಭ ಮಾಡಿದೆ, ಒಂದು ಕೋಟಿ ನೌಕರರಿಗೆ ಕೊಡಿ ಎಂದು ಆಗ್ರಹಿಸಿದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ನಾರಿಯರು 'ಆಡಳಿತಗಾರ್ತಿ'ಯಾಗಿ ಹೊರಹೊಮ್ಮಿದ ಕ್ರಾಂತಿಕಾರಿ ಹಾದಿಯ ಸ್ಮರಣೆ

ಮಹಿಳಾ ದಿನಾಚರಣೆಯಂದು ನಾವು ಅಬಲೆಯರಲ್ಲ, ಸಬಲೆಯರು ಎಂದು ದೃಢಪಡಿಸಿ, ದಿಟ್ಟ 'ಆಡಳಿತಗಾರ್ತಿ'ಯಾಗಿ ಹೊರಹೊಮ್ಮಿದ ಮಹಿಳೆಯರ ಕ್ರಾಂತಿಕಾರಿ ಹಾದಿಯನ್ನು ಸ್ಮರಿಸೋಣ. ರಾಜಕೀಯ ವ್ಯವಸ್ಥೆಯೊಳಗೆ ಬದಲಾವಣೆ ತರಲು ಹಂಬಲಿಸುತ್ತಿರುವ ಪ್ರತಿಯೊಬ್ಬ ಮಹಿಳೆಗೂ ಮಹಿಳಾ ದಿನಾಚರಣೆಯ ಶುಭಾಶಯಗಳು.

ಯಾವ ಕ್ಷೇತ್ರವೇ ಆಗಿರಲಿ ಅಲ್ಲಿ ಪುರುಷ ಪ್ರಧಾನ ವ್ಯವಸ್ಥೆಯ ಗೋಡೆಗಳು ಈ ಹಿಂದೆಯೂ ಇತ್ತು, ಇಂದೂ ಇದೆ. ಆ ಗೋಡೆಗಳನ್ನು ಕೆಡವಿ ಮುನ್ನುಗ್ಗುವುದು ಸರಳ ಹಾದಿಯಲ್ಲ. ಹಿಂದೆಯೂ-ಇಂದಿಗೂ ಮಹಿಳೆಯರು ಈ ತಡೆಗೋಡೆಯನ್ನು ಉರುಳಿಸಲು ಅಂಜುವುದಿದೆ. ಅಂತಹ ನಾರಿಗಳಿಗೆ ಸ್ಫೂರ್ತಿ ನಮ್ಮ ದಿಟ್ಟ ನಾಯಕಿಯರು.

ಮಹಿಳೆ ರಾಜಕೀಯಕ್ಕೆ ಬಂದರೆ ಅದು ಇಡೀ ಸಮಾಜದ ದಿಕ್ಕನ್ನೇ ಬದಲಿಸಬಲ್ಲದು ಎಂಬುದನ್ನು ಇತಿಹಾಸವೇ ಸಾಬೀತುಪಡಿಸಿದೆ. ದೇಶ ಸ್ವಾತಂತ್ರ್ಯ ಪಡೆದಾಗಿನಿಂದ ಇಂದಿನವರೆಗೂ, ರಾಜಕೀಯ ಎನ್ನುವುದು ಕೇವಲ ಅಧಿಕಾರದ ಗದ್ದುಗೆಯಲ್ಲ, ಅದು ಕೋಟ್ಯಂತರ ಜನರ ಬದುಕನ್ನು ರೂಪಿಸುವ ವೇದಿಕೆ ಎಂದು ಮತ್ತೆ ಮತ್ತೆ ನೆನಪಿಸಿದವರು ಮಹಿಳೆಯರು. ಸಾವಿರಾರು ವರ್ಷಗಳ ಕಾಲ ಮನೆಗೆ ಸೀಮಿತ ಎಂಬ ಹಣೆಪಟ್ಟಿಯನ್ನು ಹೊಂದಿದ್ದ ಮಹಿಳೆಯರು ಪುರುಷ ಪ್ರಧಾನ ಸಮಾಜವನ್ನು ಧಿಕ್ಕರಿಸಿ ಹೊರಬಂದು ಇಂದು ದೇಶದ ರಕ್ಷಣೆ, ಹಣಕಾಸು ಮತ್ತು ವಿದೇಶಾಂಗ ನೀತಿಗಳನ್ನು ನಿರ್ಧರಿಸುವ, ಸರ್ಕಾರದ ಭ್ರಷ್ಟತೆಯನ್ನು ನೇರವಾಗಿ, ನಿಷ್ಠುರವಾಗಿ ಪ್ರಶ್ನಿಸುವ ಹಂತಕ್ಕೆ ಬೆಳೆದಿದ್ದಾರೆ.

ಮಹಿಳಾ ದಿನಾಚರಣೆಯು ಕೇವಲ ಸಂಭ್ರಮದ ದಿನವಲ್ಲ. ಅದು ಈ ಹಿಂದೆ ಅಬಲೆಯೆಂದು ಕರೆಸಿಕೊಂಡವರು ಸಬಲೆಯಾಗಿ, ಉತ್ತಮ ಆಡಳಿತಗಾರ್ತಿಯಾಗಿ ಹೊರಹೊಮ್ಮಿದ ಕ್ರಾಂತಿಕಾರಿ ಹಾದಿಯ ಸ್ಮರಣೆ. ಅದರಲ್ಲೂ 2014ರ ನಂತರದ ಭಾರತೀಯ ರಾಜಕೀಯ ಪುಟವನ್ನೊಮ್ಮೆ ತಿರುವಿ ಹಾಕಿದರೆ, ನಮಗೆ ಕಾಣುವುದು ಪುರುಷರ ಅಬ್ಬರವಲ್ಲ, ಬದಲಿಗೆ ಮಹಿಳೆಯರ ತೀಕ್ಷ್ಣ ಮಾತುಗಳು, ಕಠಿಣ ನಿರ್ಧಾರಗಳು. ಉಕ್ಕಿನ ಮಹಿಳೆಯಿಂದ ಹಿಡಿದು ಇಂದಿನ ನಾಯಕಿಯರವರೆಗೂ ರಾಜಕೀಯದಲ್ಲಿ ಮಹಿಳೆಯರ ಗುರುತನ್ನು ನಾವಿಂದು ಸ್ಮರಿಸೋಣ.

ಇಂದಿರಾ ಗಾಂಧಿ

ದೇಶದ ಮೊದಲ ಮತ್ತು ಏಕೈಕ ಮಹಿಳಾ ಪ್ರಧಾನಮಂತ್ರಿ, ಭಾರತದ ಉಕ್ಕಿನ ಮಹಿಳೆ (   ) ಇಂದಿರಾ ಗಾಂಧಿ ದೇಶದ ಇತಿಹಾಸದಲ್ಲಿ ಅತ್ಯಂತ ಪ್ರಭಾವಶಾಲಿ ನಾಯಕರಲ್ಲಿ ಒಬ್ಬರೆಂದು ಗುರುತಿಸಲ್ಪಟ್ಟವರು. ಬಾಂಗ್ಲಾದೇಶದ ವಿಮೋಚನೆ ಮತ್ತು ಬ್ಯಾಂಕುಗಳ ರಾಷ್ಟ್ರೀಕರಣದಂತಹ ದಿಟ್ಟ ನಿರ್ಧಾರಗಳ ಮೂಲಕ ಜಗತ್ತಿನ ಗಮನವನ್ನೇ ಸೆಳೆದವರು. 1966ರ ಜನವರಿಯಿಂದ 1977ರ ಮಾರ್ಚ್‌ವರೆಗೆ ಮತ್ತು 1980ರ ಜನವರಿಯಿಂದ 1984ರ ಅಕ್ಟೋಬರ್‌ವರೆಗೆ ಇಂದಿರಾ ಗಾಂಧಿ ಪ್ರಧಾನಿಯಾಗಿ ಸೇವೆ ಸಲ್ಲಿಸಿದ್ದಾರೆ. 1971ರ ಭಾರತ-ಪಾಕಿಸ್ತಾನ ಯುದ್ಧದಲ್ಲಿ ಪಾಕಿಸ್ತಾನವನ್ನು ಸೋಲಿಸಿ ಬಾಂಗ್ಲಾದೇಶದ ಉದಯಕ್ಕೆ ಕಾರಣರಾದವರು ಇಂದಿರಾ. ಭಾರತ ರತ್ನ ಪಡೆದ ಮೊದಲ ಮಹಿಳೆ. ತುರ್ತು ಪರಿಸ್ಥಿತಿ ಹೇರುವಂತಹ ಅವರ ವಿವಾದಾತ್ಮಕ ನಿರ್ಧಾರಗಳನ್ನೂ ಬದಿಗೊತ್ತುವಂತಿಲ್ಲ.

ಅಮ್ಮ ಎಂದೇ ಹೆಸರುವಾಸಿಯಾದ ಜೆ. ಜಯಲಲಿತಾ ಅವರು ಭಾರತೀಯ ರಾಜಕೀಯದಲ್ಲಿ, ಅದರಲ್ಲೂ ವಿಶೇಷವಾಗಿ ತಮಿಳುನಾಡು ರಾಜಕೀಯದಲ್ಲಿ ಅಳಿಸಲಾಗದ ಛಾಪು ಮೂಡಿಸಿದ್ದಾರೆ. ಪುರುಷ ಪ್ರಧಾನ ರಾಜಕೀಯ ವ್ಯವಸ್ಥೆಯಲ್ಲಿ ಜಯಲಲಿತಾ ಎದುರಿಸಿದ ಸವಾಲುಗಳು ಮತ್ತು ಸಾಧಿಸಿದ ಮೈಲಿಗಲ್ಲುಗಳು ಅಭೂತಪೂರ್ವ. ಚಿತ್ರರಂಗದಿಂದ ರಾಜಕೀಯಕ್ಕೆ ಬಂದು, ಎಐಎಡಿಎಂಕೆ ಪಕ್ಷದ ಅಧಿಪತಿಯಾಗಿ ದಶಕಗಳ ಕಾಲ ತಮಿಳುನಾಡು ರಾಜಕಾರಣವನ್ನು ನಿಯಂತ್ರಿಸಿದ್ದಾರೆ. 1989ರಲ್ಲಿ ತಮಿಳುನಾಡು ವಿಧಾನಸಭೆಯ ಮೊದಲ ಮಹಿಳಾ ವಿಪಕ್ಷ ನಾಯಕಿಯಾಗಿ ಜಯಲಲಿತಾ ಆಯ್ಕೆಯಾದರು. ವಿಧಾನಸಭೆಯಲ್ಲಿ ಡಿಎಂಕೆ ನಾಯಕರುಗಳಿಂದ ತಮಗಾದ ಅವಮಾನದಿಂದ ಕೆದರಿದ ಕೂದಲಿನೊಂದಿಗೆ, ಕಣ್ಣೀರು ಹಾಕುತ್ತಲೇ ಸದನದಿಂದ ಹೊರಹೋಗಿದ್ದ ಜಯಲಲಿತಾ ಅವರು ''ಮುಖ್ಯಮಂತ್ರಿಯಾಗಿಯೇ ಈ ಸದನಕ್ಕೆ ಮರಳುತ್ತೇನೆ'' ಎಂದು ಶಪಥ ಮಾಡಿ, ಅದನ್ನು ಸಾಧಿಸಿ ತೋರಿಸಿದವರು. ಅದಾದ ಬಳಿಕ ಆರು ಬಾರಿ ತಮಿಳುನಾಡು ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದಾರೆ ಮತ್ತು ಪೂರ್ಣಾವಧಿ ಪೂರೈಸಿದ ರಾಜ್ಯದ ಮೊದಲ ಮಹಿಳಾ ಮುಖ್ಯಮಂತ್ರಿ ಎಂಬ ಇತಿಹಾಸ ಸೃಷ್ಟಿಸಿದ್ದಾರೆ.

ಸೋನಿಯಾ ಗಾಂಧಿಯವರು 1991ರಲ್ಲಿ ತಮ್ಮ ಪತಿ ರಾಜೀವ್ ಗಾಂಧಿಯವರ ಹತ್ಯೆಯ ನಂತರ ರಾಜಕೀಯದಿಂದ ದೂರವಿದ್ದರೂ, ನಂತರದ ದಿನಗಳಲ್ಲಿ ಕಾಂಗ್ರೆಸ್ ಪಕ್ಷವನ್ನು ಮುನ್ನಡೆಸಿದವರು. 1998ರಲ್ಲಿ ಕಾಂಗ್ರೆಸ್ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಸೋನಿಯಾ ಅವರು, ಅಸ್ತಿತ್ವದ ಬಿಕ್ಕಟ್ಟಿನಲ್ಲಿದ್ದ ಕಾಂಗ್ರೆಸ್ ಅನ್ನು ಒಗ್ಗೂಡಿಸಿ ಸತತ 15 ವರ್ಷಗಳ ಕಾಲ ಸುದೀರ್ಘ ಅವಧಿಗೆ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದವರು. 2004ರಲ್ಲಿ ಸಮಾನ



ಮನಸ್ಕ ಪಕ್ಷಗಳನ್ನು ಒಗ್ಗೂಡಿಸಿ ಸಂಯುಕ್ತ ಪ್ರಗತಿಪರ ಮೈತ್ರಿಕೂಟವನ್ನು () ರಚಿಸಿದವರು ಸೋನಿಯಾ. ಈ ಮೈತ್ರಿಕೂಟ ಸತತ ಎರಡು ಅವಧಿಗೆ (2004-2014) ಕೇಂದ್ರದಲ್ಲಿ ಅಧಿಕಾರ ನಡೆಸಿದೆ. 2004ರಲ್ಲಿ ಪ್ರಧಾನಿ ಹುದ್ದೆಗೇರುವ ಅವಕಾಶವಿದ್ದರೂ, ಅದನ್ನು ನಿರಾಕರಿಸಿ ಡಾ. ಮನಮೋಹನ್ ಸಿಂಗ್ ಅವರನ್ನು ಪ್ರಧಾನಿಯನ್ನಾಗಿ ಆಯ್ಕೆ ಮಾಡಿದರು. ಸೋನಿಯಾ ಗಾಂಧಿ ತಮ್ಮ ಇಡೀ ರಾಜಕೀಯ ಜೀವನದಲ್ಲಿ ಒಂದೂ ಲೋಕಸಭಾ ಚುನಾವಣೆಯನ್ನು ಸೋತಿಲ್ಲ ಎಂಬುದು ಗಮನಾರ್ಹ. ಸ್ಪರ್ಧಿಸಿದ ಎಲ್ಲಾ ಚುನಾವಣೆಗಳಲ್ಲಿಯೂ ಭರ್ಜರಿ ಜಯ ಸಾಧಿಸಿದ್ದಾರೆ.

ದೇಶದ ಮೊದಲ ಪೂರ್ಣಾವಧಿ ಮಹಿಳಾ ವಿದೇಶಾಂಗ ಸಚಿವೆ ಸುಷ್ಮಾ ಸ್ವರಾಜ್. ಅದಕ್ಕೂ ಹಿಂದೆಯೇ ಇಂದಿರಾ ಈ ಖಾತೆಯನ್ನು ನಿರ್ವಹಿಸಿದ್ದರು. ಆದರೆ ಸುಷ್ಮಾ ಸ್ವರಾಜ್ ಅವರು ಭಾರತದ ಮೊದಲ ಪೂರ್ಣಾವಧಿ ಮಹಿಳಾ ವಿದೇಶಾಂಗ ಸಚಿವೆಯಾಗಿ 2014ರಿಂದ 2019ರವರೆಗೆ ಸೇವೆ ಸಲ್ಲಿಸಿದ್ದಾರೆ. ಹಾಗೆಯೇ 1998ರಲ್ಲಿ ದೆಹಲಿಯ ಮೊದಲ ಮಹಿಳಾ ಮುಖ್ಯಮಂತ್ರಿಯಾಗಿದ್ದಾರೆ. ಕೇವಲ 25ನೇ ವಯಸ್ಸಿನಲ್ಲಿಯೇ 1977ರ ಹರಿಯಾಣ ಸರ್ಕಾರದಲ್ಲಿ ಸಚಿವೆಯಾಗುವ ಮೂಲಕ ಅತಿ ಕಿರಿಯ ವಯಸ್ಸಿನ ಕ್ಯಾಬಿನೆಟ್ ಸಚಿವೆ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ. ಸೋನಿಯಾ ಗಾಂಧಿ ಬಳಿಕ ಲೋಕಸಭೆಯ ಎರಡನೇ ಮಹಿಳಾ ವಿರೋಧ ಪಕ್ಷದ ನಾಯಕಿಯಾಗಿ ಕಾರ್ಯನಿರ್ವಹಿಸಿದ್ದಾರೆ.

ದೇಶದ ಇತಿಹಾಸದಲ್ಲಿ ಅತ್ಯಂತ ಪ್ರಭಾವಶಾಲಿ ಮಹಿಳಾ ನಾಯಕರಲ್ಲಿ ಮಾಯಾವತಿಯೂ ಒಬ್ಬರು. ಬಹುಜನ ಚಳವಳಿಯ ನಾಯಕ ಕಾನ್ಶಿರಾಮ್ ಅವರ ರಾಜಕೀಯಕ್ಕೆ ಆಕರ್ಷಿತರಾದ ಮಾಯಾವತಿ 1984ರಲ್ಲಿ ಬಹುಜನ ಸಮಾಜ ಪಕ್ಷ () ಸ್ಥಾಪನೆಯಾದಾಗಿನಿಂದ ಪಕ್ಷದಲ್ಲಿ ಸಕ್ರಿಯವಾಗಿದ್ದಾರೆ. ಉತ್ತರ ಪ್ರದೇಶದಾದ್ಯಂತ ಬಿಎಸ್‌ಪಿ ಸಂಘಟಿಸುವಲ್ಲಿ ಪ್ರಮುಖ ಪಾತ್ರ ವಹಿಸಿದವರು. 1995ರಲ್ಲಿ ಉತ್ತರ ಪ್ರದೇಶದ ಮುಖ್ಯಮಂತ್ರಿಯಾದ ಮಾಯಾವತಿ ಅವರು ಭಾರತದ ಇತಿಹಾಸದಲ್ಲೇ ಮೊದಲ ದಲಿತ ಮಹಿಳಾ ಮುಖ್ಯಮಂತ್ರಿ ಎಂಬ ಹೆಗ್ಗಳಿಕೆ ಪಡೆದಿದ್ದಾರೆ. ಅದಾದ ಬಳಿಕ ಒಟ್ಟು ನಾಲ್ಕು ಬಾರಿ ಯುಪಿ ಸಿಎಂ ಆಗಿದ್ದಾರೆ.

ಪ್ರಸ್ತುತ ದೇಶದ ವಿರೋಧ ಪಕ್ಷದ ಸಾಲಿನಲ್ಲಿರುವ ಅತ್ಯಂತ ಶಕ್ತಿಶಾಲಿ ಮಹಿಳೆ, ಪಶ್ಚಿಮ ಬಂಗಾಳದ ಮೊದಲ ಮಹಿಳಾ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ. 2011ರಲ್ಲಿ ಪಶ್ಚಿಮ ಬಂಗಾಳದಲ್ಲಿ 34 ವರ್ಷಗಳ ಕಾಲ ಆಡಳಿತ ನಡೆಸಿದ್ದ ಎಡರಂಗದ ( ) ಸರ್ಕಾರವನ್ನು ಸೋಲಿಸಿ ಅಧಿಕಾರಕ್ಕೆ ಬಂದಿದ್ದಾರೆ. 2021ರ ಬಂಗಾಳ ಚುನಾವಣೆಯಲ್ಲಿ ಇಡೀ ಕೇಂದ್ರ ಸರ್ಕಾರದ ಪ್ರಚಾರ ಯಂತ್ರದ ವಿರುದ್ಧವಾಗಿ ಏಕಾಂಗಿಯಾಗಿ ಹೋರಾಡಿ ಜಯಗಳಿಸಿರುವುದೇ ಮಮತಾ ರಾಜಕೀಯ ಶಕ್ತಿಗೆ ಸಾಕ್ಷಿ. ಈ ಹಿಂದೆ ಕೇಂದ್ರ ರೈಲ್ವೆ ಸಚಿವರಾಗಿ ಎರಡು ಬಾರಿ (1999 ಮತ್ತು 2009), ಕಲ್ಲಿದ್ದಲು ಮತ್ತು ಗಣಿ ಸಚಿವರಾಗಿ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರಾಗಿ ಸೇವೆ ಸಲ್ಲಿಸಿದ್ದಾರೆ. 1998ರಲ್ಲಿ ಕಾಂಗ್ರೆಸ್‌ನಿಂದ ಹೊರಬಂದು ಟಿಎಂಸಿ ಸ್ಥಾಪಿಸಿ ಇಂದಿಗೂ ಪಶ್ಚಿಮ ಬಂಗಾಳದಲ್ಲಿ ಪ್ರಭಾವ ಹೊಂದಿದ್ದಾರೆ. ಪ್ರಸ್ತುತ ದೇಶದಲ್ಲಿರುವ ಇಬ್ಬರು ಮಹಿಳಾ ಮಹಿಳಾ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಒಬ್ಬರು.

2014ರ ನಂತರ ರಾಜಕೀಯದ ಅತ್ಯಂತ ಪ್ರಭಾವಶಾಲಿ ಮಹಿಳೆಯರಲ್ಲಿ ನಿರ್ಮಲಾ ಕೂಡಾ ಒಬ್ಬರು. ಭಾರತದ ಮೊದಲ ಪೂರ್ಣಾವಧಿಯ ರಕ್ಷಣಾ ಸಚಿವೆಯಾಗಿದ್ದ ನಿರ್ಮಲಾ, ಪ್ರಸ್ತುತ ದೇಶದ ಎರಡನೇ ಹಣಕಾಸು ಸಚಿವೆಯಾಗಿ ಕಾರ್ಯನಿರ್ಹಿಸುತ್ತಿದ್ದಾರೆ. 2025ರ ಬಜೆಟ್ ಮಂಡನೆಯೊಂದಿಗೆ ಸತತವಾಗಿ ಎಂಟು ಬಾರಿ ಬಜೆಟ್ ಮಂಡಿಸಿದ ಮೊದಲ ಮಹಿಳಾ ಹಣಕಾಸು ಸಚಿವೆ ಎಂಬ ಹೆಗ್ಗಳಿಕೆ ಪಡೆದಿದ್ದಾರೆ. ಸತತ ಹಲವು ವರ್ಷಗಳಿಂದ ಫೋರ್ಬ್ಸ್‌ನ ವಿಶ್ವದ 100 ಅತ್ಯಂತ ಶಕ್ತಿಶಾಲಿ ಮಹಿಳೆಯರ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ. 2024ರ ಪಟ್ಟಿಯಲ್ಲಿ 32ನೇ ಸ್ಥಾನದಲ್ಲಿದ್ದರು. 2003 ರಿಂದ 2005ರವರೆಗೆ ರಾಷ್ಟ್ರೀಯ ಮಹಿಳಾ ಆಯೋಗದ () ಸದಸ್ಯೆಯಾಗಿ ಕಾರ್ಯನಿರ್ವಹಿಸಿದ್ದಾರೆ.

ರಾಜಕೀಯ ಹಿನ್ನೆಲೆಯಿರುವ ಕುಟುಂಬದಿಂದಲೇ ಬಂದ ಪ್ರಿಯಾಂಕಾ ಗಾಂಧಿ ವಾದ್ರಾ ಅವರು, ಕಳೆದ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ವಯನಾಡು ಸಂಸದೆಯಾಗಿದ್ದಾರೆ. ಸದ್ಯ ಲೋಕಸಭೆಯಲ್ಲಿ ಆಡಳಿತಾರೂಢ ಬಿಜೆಪಿಗೆ ಉತ್ತರಿಸಲು ಸಾಧ್ಯವಾಗದಂತಹ ಪ್ರಶ್ನೆಗಳನ್ನು ಎತ್ತುದ್ದಿದ್ದಾರೆ. ಉತ್ತರ ಪ್ರದೇಶದ 2022ರ ವಿಧಾನಸಭಾ ಚುನಾವಣೆಯ ವೇಳೆ ''ಲಡ್ಕಿ ಹೂಂ, ಲಡ್ ಸಕ್ತಿ ಹೂಂ'' (ನಾನು ಹುಡುಗಿ, ನಾನು ಹೋರಾಡಬಲ್ಲೆ) ಎಂಬ ಘೋಷಣೆಯೊಂದಿಗೆ ಮಹಿಳಾ ಸಬಲೀಕರಣದ ಅಭಿಯಾನವನ್ನು ಮುನ್ನಡೆಸಿದರು. ಈ ಅಭಿಯಾನದ ಅಡಿಯಲ್ಲಿ ಕಾಂಗ್ರೆಸ್ ಪಕ್ಷವು ಮಹಿಳೆಯರಿಗೆ ಶೇ. 40ರಷ್ಟು ಸೀಟುಗಳನ್ನು ಮೀಸಲಿಟ್ಟಿತ್ತು. ಪ್ರಿಯಾಂಕಾ ಅವರ ವ್ಯಕ್ತಿತ್ವ, ಮಾತಿನ ಶೈಲಿ ಮತ್ತು ನಾಯಕತ್ವದ ಗುಣಗಳು ಅವರ ಅಜ್ಜಿ, ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರನ್ನು ನೆನಪಿಸುತ್ತವೆ ಎಂಬುದು ಮತದಾರರ ಮೇಲೆ ಧನಾತ್ಮಕ ಪ್ರಭಾವ ಬೀರಿದೆ. ಕರ್ನಾಟಕ ವಿಧಾನಸಭೆ ಚುನಾವಣೆಯ ಸಂದರ್ಭದಲ್ಲಿ ಬೆಂಗಳೂರಿನಲ್ಲಿ ನಡೆದ ನಾ ನಾಯಕಿ ಮಹಿಳಾ ಸಮಾವೇಶದಲ್ಲಿ ಭಾಗವಹಿಸಿ, ಮಹಿಳಾ ಮತದಾರರನ್ನು ಸೆಳೆಯುವಲ್ಲಿ ಮತ್ತು ಮಹಿಳೆಯರಿಗೆ ಆರ್ಥಿಕ ನೆರವು ನೀಡುವ ಯೋಜನೆಗಳನ್ನು ರೂಪಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸಿದವರು ಪ್ರಿಯಾಂಕಾ.

ಸಮಕಾಲೀನ ಭಾರತೀಯ ರಾಜಕೀಯದಲ್ಲಿ ಒಬ್ಬ ಪ್ರಭಾವಶಾಲಿ ಮಹಿಳಾ ನಾಯಕಿ ಮಹುವಾ ಮೊಯಿತ್ರಾ. ಪಶ್ಚಿಮ ಬಂಗಾಳದ ಟಿಎಂಸಿ ಪಕ್ಷವನ್ನು ಪ್ರತಿನಿಧಿಸುವ ಮೊಯಿತ್ರಾ, ಸಂಸತ್ತಿನಲ್ಲಿ ತಮ್ಮ ಹರಿತವಾದ ಭಾಷಣಗಳು ಮತ್ತು ದಿಟ್ಟ ನಿಲುವುಗಳಿಂದ ಹೆಸರುವಾಸಿ. ಜೆಪಿ ಮೋರ್ಗಾನ್ ಸಂಸ್ಥೆಯಲ್ಲಿ ಇನ್ವೆಸ್ಟ್‌ಮೆಂಟ್ ಬ್ಯಾಂಕರ್ ಆಗಿ ಲಂಡನ್‌ನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಮೊಯಿತ್ರಾ, ತಮ್ಮ ಉನ್ನತ ಉದ್ಯೋಗವನ್ನು ಬಿಟ್ಟು 2009ರಲ್ಲಿ ಭಾರತಕ್ಕೆ ಮರಳಿದ್ದಾರೆ. ಆರಂಭದಲ್ಲಿ ಕಾಂಗ್ರೆಸ್ ಸೇರಿದ್ದ ಅವರು ಬಳಿಕ ಟಿಎಂಸಿ ಸೇರಿ 2016ರಲ್ಲಿ ಪಶ್ಚಿಮ ಬಂಗಾಳದ ಕರಿಂಪುರ ಕ್ಷೇತ್ರದಿಂದ ಶಾಸಕಿಯಾಗಿ ಆಯ್ಕೆಯಾಗಿದ್ದಾರೆ. 2019ರ ಲೋಕಸಭೆಯಲ್ಲಿ ಕೃಷ್ಣನಗರ ಕ್ಷೇತ್ರದಿಂದ ಸ್ಪರ್ಧಿಸಿ ಸಂಸತ್ ಪ್ರವೇಶಿಸಿದ ಮೊಯಿತ್ರಾ ಅವರ ಫ್ಯಾಸಿಸಂನ ಲಕ್ಷಣಗಳು ಕುರಿತಾಗಿ ನೀಡಿದ ಚೊಚ್ಚಲ ಭಾಷಣವು ರಾಷ್ಟ್ರಮಟ್ಟದಲ್ಲಿ ಭಾರಿ ಚರ್ಚೆಗೆ ನಾಂದಿ ಹಾಡಿತ್ತು. 2023ರಲ್ಲಿ ಕೆಲವು ವಿವಾದಗಳ ಕಾರಣದಿಂದ ಮೊಯಿತ್ರಾ ಅವರನ್ನು ಸಂಸತ್ತಿನಿಂದ ಉಚ್ಛಾಟಿಸಲಾಗಿತ್ತು. ಆದರೆ 2024ರ ಲೋಕಸಭೆ ಚುನಾವಣೆಯಲ್ಲಿ ಮತ್ತೆ ಅದೇ ಕೃಷ್ಣನಗರ ಕ್ಷೇತ್ರದಿಂದ ಭಾರಿ ಮತಗಳ ಅಂತರದಿಂದ ಗೆದ್ದು ಸಂಸತ್ತಿಗೆ ಮರಳುವ ಮೂಲಕ ತಮ್ಮ ಪ್ರಭಾವವನ್ನು ಸಾಬೀತುಪಡಿಸಿದ್ದಾರೆ. ತಮ್ಮ ನಿರರ್ಗಳ ಇಂಗ್ಲಿಷ್ ಭಾಷಣಗಳು, ಅಂಕಿಅಂಶಗಳ ಸಹಿತ ನೀಡುವ ತರ್ಕಬದ್ಧವಾದ ವಾದಗಳು ಮತ್ತು ಮಹಿಳಾ ಹಕ್ಕುಗಳ ಪರವಾಗಿ ಧ್ವನಿ ಎತ್ತುವ ಗುಣಕ್ಕಾಗಿ ಸದ್ಯ ಹೆಸರುವಾಸಿಯಾಗಿದ್ದಾರೆ.

ರಾಷ್ಟ್ರೀಯತಾವಾದಿ ಕಾಂಗ್ರೆಸ್ ಪಕ್ಷದ (ಎನ್‌ಸಿಪಿ ಎಸ್‌ಪಿ) ಪ್ರಮುಖ ನಾಯಕಿಯಾಗಿರುವ ಸುಪ್ರಿಯಾ ಸುಳೆ ಬಾರಾಮತಿ ಲೋಕಸಭಾ ಕ್ಷೇತ್ರದಿಂದ ಸತತವಾಗಿ ಆಯ್ಕೆಯಾಗುತ್ತಿದ್ದು, ಅನೇಕ ಬಾರಿ ಸಂಸದ ರತ್ನ ಪ್ರಶಸ್ತಿಗೆ ಭಾಜನರಾಗಿದ್ದಾರೆ. 2011ರಲ್ಲಿ ಮಹಾರಾಷ್ಟ್ರದಾದ್ಯಂತ ಹೆಣ್ಣು ಭ್ರೂಣ ಹತ್ಯೆಯ ವಿರುದ್ಧ ಬೃಹತ್ ಪಾದಯಾತ್ರೆ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಸಂಘಟಿಸಿದವರು ಸುಪ್ರಿಯಾ. ರಾಜಕೀಯದಲ್ಲಿ ಯುವತಿಯರಿಗೆ ವೇದಿಕೆ ಒದಗಿಸುವ ನಿಟ್ಟಿನಲ್ಲಿ 2012ರಲ್ಲಿ ರಾಷ್ಟ್ರವಾದಿ ಯುವತಿ ಕಾಂಗ್ರೆಸ್ ಅನ್ನು ಪ್ರಾರಂಭಿಸಿದರು. ಶಿಕ್ಷಣದ ಮೂಲಕ ಮಹಿಳಾ ಸಬಲೀಕರಣ ಮತ್ತು ಕುಡಿಯುವ ನೀರಿನ ಮಾಲಿನ್ಯದಂತಹ ವಿಚಾರದಲ್ಲಿ ಕಾರ್ಯನಿರ್ವಹಿಸಿದ ಸುಪ್ರಿಯಾ ಅವರಿಗೆ ಮುಂಬೈ ವುಮೆನ್ ಆಫ್ ದಿ ಡಿಕೇಡ್ ಅಚೀವರ್ಸ್ ಪ್ರಶಸ್ತಿ ಲಭಿಸಿದೆ. ಸದ್ಯ ಸಂಸತ್ತಿನಲ್ಲಿ ಮಹಿಳಾ ಮೀಸಲಾತಿ, ಲಿಂಗ ಸಮಾನತೆ ಮತ್ತು ಮಕ್ಕಳ ಹಕ್ಕುಗಳ ಪರವಾಗಿ ನಿರಂತರವಾಗಿ ಧ್ವನಿ ಎತ್ತುತ್ತಿದ್ದಾರೆ.

ರಾಜ್ಯದಲ್ಲಿಯೂ ಪಚಾಯತ್ ರಾಜ್ ವ್ಯವಸ್ಥೆಯಿಂದ ಹಿಡಿದು ವಿಧಾನಸಭೆಯವರೆಗೆ ಮಹಿಳೆಯರ ಪಾತ್ರ ದೊಡ್ಡದಿದೆ. ರಾಜ್ಯದಲ್ಲಿ ಲಕ್ಷ್ಮಿ ಹೆಬ್ಬಾಳ್ಕರ್ ಅವರಂತಹ ನಾಯಕಿಯರು ಮಹಿಳಾ ಪ್ರಧಾನ ಗ್ಯಾರಂಟಿ ಯೋಜನೆಗಳ ಮೂಲಕ ಮನೆಮನೆಗೆ ತಲುಪಿದ್ದಾರೆ. ಸದ್ಯ ನಯನಾ ಮೋಟಮ್ಮ ಯುವ ನಾಯಕಿಯಾಗಿ ವಿಧಾನಸಭೆಯಲ್ಲಿ ತಮ್ಮ ಸ್ಪಷ್ಟ ಮತ್ತು ತಾರ್ಕಿಕ ಮಾತುಗಳ ಮೂಲಕ ಗಮನ ಸೆಳೆಯುತ್ತಿದ್ದಾರೆ. ಹೀಗೆ ರಾಜ್ಯ-ಕೇಂದ್ರ ರಾಜಕೀಯದಲ್ಲಿ ಮಹಿಳೆಯರು ಅವಿರತ ಸಾಧನೆಗೈದಿದ್ದಾರೆ.

2023ರಲ್ಲಿ ಕೇಂದ್ರ ಸರ್ಕಾರ ನಾರಿ ಶಕ್ತಿ ವಂದನ್ ಅಧಿನಿಯಮ (ಮಹಿಳಾ ಮೀಸಲಾತಿ ಬಿಲ್) ಅಂಗೀಕರಿಸಿದೆ. ಆದರೆ ಇನ್ನೂ ಜಾರಿಗೊಳಿಸಿಲ್ಲ. ಈ ಕಾನೂನು ಪ್ರಕಾರ ಮುಂದಿನ ದಿನಗಳಲ್ಲಿ ಶೇ. 33ರಷ್ಟು ಮಹಿಳೆಯರು ಸಂಸತ್ತಿನಲ್ಲಿ ಸ್ಥಾನ ಪಡೆಯಲಿದ್ದಾರೆ. ರಾಜಕೀಯ ಎನ್ನುವುದು ಇನ್ನು ಮುಂದೆ ಕೇವಲ ಪುರುಷರ ಅಂಗಳವಲ್ಲ, ಅದು ಮಹಿಳೆಯರ ವಿವೇಚನೆ, ಸಹನೆ, ಜ್ಞಾನದ ಅಂಗಳ. ರಾಜಕೀಯ ವ್ಯವಸ್ಥೆಯೊಳಗೆ ಬದಲಾವಣೆ ತರಲು ಹಂಬಲಿಸುತ್ತಿರುವ ಪ್ರತಿಯೊಬ್ಬ ಮಹಿಳೆಗೂ ಮಹಿಳಾ ದಿನಾಚರಣೆಯ ಶುಭಾಶಯಗಳು.


ಷೇರು ಮಾರುಕಟ್ಟೆಯಲ್ಲಿ ನಷ್ಟ: ಸಾಲಬಾಧೆ ತಾಳಲಾರದೆ ಬೆಂಗಳೂರಿನ ವ್ಯಕ್ತಿ ಆತ್ಮಹತ್ಯೆ

ಬೆಂಗಳೂರು: ಷೇರು ಮಾರುಕಟ್ಟೆಯಲ್ಲಿ ಹೂಡಿಕೆ ಮಾಡಿ ಲಕ್ಷಾಂತರ ರೂಪಾಯಿ ನಷ್ಟ ಮತ್ತು ಸಾಲಗಾರರ ಕಾಟದಿಂದ ಬೇಸತ್ತ ವ್ಯಕ್ತಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಭಾನುವಾರ ಸಂಜೆ ನಗರದ ಹೆಬ್ಬಾಳ ಬಳಿ ನಡೆದಿದೆ. ಮೃತ ವ್ಯಕ್ತಿಯನ್ನು ವೆಂಕಟೇಶ್ (50) ಎಂದು ಗುರುತಿಸಲಾಗಿದೆ.

ಷೇರು ಮಾರುಕಟ್ಟೆಯಲ್ಲಿ ದೊಡ್ಡ ಮೊತ್ತದ ಹಣ ಹೂಡಿಕೆ ಮಾಡಿದ್ದ ವೆಂಕಟೇಶ್ ನಷ್ಟ ಅನುಭವಿಸಿದ್ದರು. ಆ ನಷ್ಟವನ್ನು ಸರಿದೂಗಿಸಲು ಹಲವರಿಂದ ಸಾಲ ಪಡೆದಿದ್ದರು. ಇತ್ತೀಚಿನ ದಿನಗಳಲ್ಲಿ ಸಾಲಗಾರರ ಒತ್ತಡ ಹೆಚ್ಚಾಗಿತ್ತು. ಇದರ ಜೊತೆಗೆ ಅವರು ತೀವ್ರ ಅನಾರೋಗ್ಯದಿಂದಲೂ ಬಳಲುತ್ತಿದ್ದರು ಎಂಬ ಮಾಹಿತಿ ದೊರೆತಿದೆ.

ಭಾನುವಾರ ಸಂಜೆ ಡೆತ್ ನೋಟ್ ಬರೆದಿದ್ದ ವೆಂಕಟೇಶ್, ನನ್ನ ಸಾವಿಗೆ ನಾನೇ ಕಾರಣ. ಷೇರು ಮಾರುಕಟ್ಟೆಯಲ್ಲಿ ಹೂಡಿಕೆ ಮಾಡಿ ನಷ್ಟ ಅನುಭವಿಸಿದ್ದೆ. ಇದರಿಂದ ಸಾಲಗಾರನಾದೆ. ಈಗ ಅನಾರೋಗ್ಯವೂ ಕಾಡುತ್ತಿದೆ ಎಂದು ಉಲ್ಲೇಖಿಸಿರುವುದಾಗಿ ಪೊಲೀಸ್ ಮೂಲಗಳು ತಿಳಿಸಿವೆ.

ವಿಷಯ ತಿಳಿದ ಕೂಡಲೇ ಬೈಯಪ್ಪನಹಳ್ಳಿ ರೈಲ್ವೆ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ. ಅಸಹಜ ಸಾವು ಪ್ರಕರಣ ದಾಖಲಿಸಿಕೊಳ್ಳಲಾಗಿದ್ದು, ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.



ಪ್ರತ್ಯೇಕ ಸುದ್ದಿ: ಹೆಣ್ಣೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಗೃಹಿಣಿಯೊಬ್ಬರ ಶವ ಪತ್ತೆಯಾಗಿದೆ. 27 ವರ್ಷದ ಸುಪ್ರಿತಾ ಮೃತ ಗೃಹಿಣಿ. ಮೇಲ್ನೋಟಕ್ಕೆ ಆತ್ಮಹತ್ಯೆಯಂತೆ ಕಂಡುಬಂದಿದ್ದು, ಸಾವಿಗೆ ನಿಖರ ಕಾರಣ ತಿಳಿದು ಬಂದಿಲ್ಲ. ಹೆಣ್ಣೂರು ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಕಳೆದ ಐದು ವರ್ಷಗಳ ಹಿಂದೆ ಕಿರಣ್ ಕುಮಾರ್ ಎಂಬವರೊಂದಿಗೆ ಸುಪ್ರಿತಾ ವಿವಾಹವಾಗಿತ್ತು. ಕಿರಣ್ ಖಾಸಗಿ ಸಂಸ್ಥೆಯೊಂದರ ಸೇಲ್ಸ್ ಟೀಂನಲ್ಲಿ ಕೆಲಸ ಮಾಡುತ್ತಿದ್ದರೆ, ಸುಪ್ರಿತಾ ಗೃಹಿಣಿಯಾಗಿದ್ದರು. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ರವಾನಿಸಲಾಗಿದೆ.

ಆತ್ಮಹತ್ಯೆ ಪರಿಹಾರವಲ್ಲ: ನಿಮಗೆ ಆತ್ಮಹತ್ಯಾ ಆಲೋಚನೆಗಳು ಬರುತ್ತಿದ್ದರೆ ಅಥವಾ ನೀವು ಸ್ನೇಹಿತರ ಬಗ್ಗೆ ಚಿಂತಿತರಾಗಿದ್ದರೆ, ಇಲ್ಲವೇ ನಿಮಗೆ ಭಾವನಾತ್ಮಕ ಬೆಂಬಲದ ಅಗತ್ಯವಿದ್ದರೆ, ಸಲಹೆ ನೀಡಲು ಯಾವಾಗಲೂ, ಯಾರಾದರೂ ಇದ್ದೇ ಇರುತ್ತಾರೆ. ಸ್ನೇಹ ಫೌಂಡೇಶನ್ - 04424640050 (247 ಲಭ್ಯವಿದೆ) ಅಥವಾ ಟಾಟಾ ಇನ್ಸ್ಟಿಟ್ಯೂಟ್ ಆಫ್ ಸೋಶಿಯಲ್ ಸೈನ್ಸಸ್ ಸಹಾಯವಾಣಿ ಐಕಾಲ್ ನಂಬರ್ 9152987821 (ಸೋಮವಾರದಿಂದ ಶನಿವಾರದವರೆಗೆ ಬೆಳಗ್ಗೆ 8ರಿಂದ ರಾತ್ರಿ 10ರವರೆಗೆ ಲಭ್ಯವಿದೆ) ಕರೆ ಮಾಡಬಹುದು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR